ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸತ್ಯಮೇವ ಜಯತೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME-13 ಸಂಪುಟ:13 | ISSUE- ಸಂಚಿಕೆ: 05 | PAGE- ಪುಟ 8 | ಗುರುವಾರ 06.02.2025 | RS.ಬೆಲೆ 2/-

# ಬೈಕ್‌ಗೆ ಬಸ್ ಡಿಕ್ಕಿ:

## ಒಂದೇ ಕುಟುಂಬದ ಐವರ ದಾರುಣ ಸಾವು

ಮಲ್ಲಮ್ಮ ನುಡಿ ವಾರ್ತೆ

ಸುರಪುರ:ಫೆ.5: ತಾಲೂಕಿನ ತಿಂಥಣಿ ಗ್ರಾಮದ ಕಮಾನ್ ಬಳಿ ಶ್ರೀರಂಗಪಟ್ಟಣ-ಬೀದರ್ ರಾಷ್ಟ್ರೀಯ ಹೆದ್ದಾರಿ ಮೇಲೆ ಬೈಕ್ ಗೆ ಹಿಂಬದಿಯಿಂದ ಬಂದ ಬಸ್ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಮೇಲೆ ಪ್ರಯಾಣಿಸುತ್ತಿದ್ದ ಒಂದೇ ಕುಟುಂಬದ ಐದು ಜನ ಸದಸ್ಯರು ಸಾವನ್ನಪ್ಪಿರುವ ಘಟನೆ ಬುಧವಾರ ನಡೆದಿದೆ.




ಆಂಜನೇಯ (35), ಗಂಗಮ್ಮ 28) ಎಂಬ ದಂಪತಿ ಮಕ್ಕಳಾದ ಹಣಮಂತ (1), ಪವಿತ್ರ (5) ಹಾಗೂ ರಾಯಪ್ಪ (3) ಸೇರಿ ಐವರು ಸಾವನ್ನಪ್ಪಿರುವ ಘಟನೆ ನಡೆದಿದೆ. ಬೈಕ್ ಮೇಲಿದ್ದವರು ಶಹಾಪೂರ ತಾಲೂಕಿನ ಹಳಿಸಗರ ನಿವಾಸಿಗಳಾಗಿದ್ದು ದೇವರ ಕಾರ್ಯಕ್ರಮಕ್ಕೆಂದು ಲಿಂಗಸೂಗೂರು ತಾಲೂಕಿನ ಗುರುಗುಂಟಕ್ಕೆ ಪ್ರಯಾಣಿಸುತ್ತಿದ್ದರು ಎನ್ನಲಾಗಿದೆ.

ಮುಂದೆ ಹೋಗುತ್ತಿದ್ದ ಲಾರಿಗೆ ಸೈಡ್ ಹೊಡೆದು ಓವರ್ ಟೇಕ್ ಮಾಡಿ ಹೋಗುತ್ತಿದ್ದಾಗ

(2ನೇ ಪುಟ ನೋಡಿ)

## ತಕ್ಷಣ ಬೇಕಾಗಿದ್ದಾರೆ

ಸರ್ಕಾರದಿಂದ ಮಾನ್ಯತೆ ಪಡೆದ ಹಾಗೂ ಎಂಟು ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟಗೊಳ್ಳುತ್ತಿರುವ ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನ ಪತ್ರಿಕೆಯಲ್ಲಿ. ಬೀದರ್, ಕಲಬುರ್ಗಿ, ಯಾದಗಿರಿ, ರಾಯಚೂರು, ಬಳ್ಳಾರಿ, ಬಾಗಲಕೋಟೆ, ಜಿಲ್ಲಾವಾರು. ಜಾಹಿರಾತು ವ್ಯವಸ್ಥಾಪಕರಾಗಿ ಕೆಲಸ ಮಾಡಲು ತಕ್ಷಣ ಬೇಕಾಗಿದ್ದಾ-ರೆ. ಅನುಭವ ಇದ್ದವರಿಗೆ ಆದ್ಯತೆ ನೀಡಲಾಗುವುದು. ಅಸಕ್ತರು ತಮ್ಮ ಸ್ವವಿವರ ಹಾಗೂ ಅನುಭವದ ಪ್ರಮಾಣ ಪತ್ರದೊಂದಿಗೆ ಹುಮನಾಬಾದ್ ಪಟ್ಟಣದ ಗಾದಾ ಕಾಂಪ್ಲೆಕ್ಸ್ ನಲ್ಲಿ ಇರುವ ಮಲ್ಲಮ್ಮ ನುಡಿ ಪ್ರಾದೇಶಿಕ ಪತ್ರಿಕೆಯ ಕಾರ್ಯಾಲಯಕ್ಕೆ ಸಂಪರ್ಕಿಸಲು ಕೊರಿದೆ.

ಸಂಪಾದಕರು.

ದೂ.9449732000,9448604450

# ಲಾರಿ ಡಿಕ್ಕಿ :ಬೈಕ ಸವಾರ

## ಸ್ಥಳದಲ್ಲಿಯೇ ಸಾವು



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಫೆ.5: ತಾಲ್ಲೂಕಿನ ಚಿಕ್ಕಬಗನಾಳ ಗ್ರಾಮದ ಸಮೀಪದ ಹುಲಿಗೆಮ್ಮ ದೇವಿ ಡಾಬಾ ಬಳಿ ವೇಗವಾಗಿ ಚಲಿಸುತ್ತಿದ್ದ ಸಿವಿಲ್ ಲಾರಿಯೊಂದು ಬೈಕ್ ಸವಾರನಿಗೆ ಡಿಕ್ಕಿ ಹೊಡೆದ ಪರಿಣಾಮವಾಗಿ ಸ್ಥಳದಲ್ಲಿಯೇ ಯುವಕ ಸಾವನಪ್ಪಿದ ಘಟನೆ ಇಂದು ಮುಂಜಾನೆ ನಡೆದಿದೆ.

ಸಾವನಪ್ಪಿದ ಯುವಕನನ್ನು ಭೀಮೇಶ ತಂದೆ ಹನುಮಂತಪ್ಪ ಚನ್ನದಾಸರ (19) ಎಂದು ಗುರುತಿಸಲಾಗಿದೆ. ಎಂದಿನಂತೆ ತನ್ನ ಜಮೀನಿಗೆ ಹೋಗಿ ಬರುತ್ತಿದ್ದನು ಇಂದು ಬೆಳಿಗ್ಗೆ ಜಮೀನಿಗೆ ತೆರಳಿ ಮನೆಗೆ ಹೋಗುವ ಸಂದರ್ಭದಲ್ಲಿ ಮಾರ್ಗಮಧ್ಯದಲ್ಲಿ ಡಾಬಾ ಬಳಿ ವೇಗವಾಗಿ ಚಲಿಸುತ್ತಿದ್ದ ಸಿವಿಲ್ ಲಾರಿ ಡಿಕ್ಕಿ ಹೊಡೆದ ಪರಿಣಾಮವಾಗಿ ಸ್ಥಳದಲ್ಲಿಯೇ ಮೃತಪಟ್ಟಿದ್ದಾನೆ. ಲಾರಿ ಚಾಲಕ ಪರಾರಿಯಾಗಿದ್ದು, ಘಟನಾ ಸ್ಥಳಕ್ಕೆ ಮುನಿರಾಬಾದ್ ಪಿಎಸ್ಐ ಸುನೀಲ್ ಕುಮಾರ ಭೇಟಿ ನೀಡಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿದ್ದಾರೆ.

# ಕೋಟ್ಯಾಂತರ ರೂಪಾಯಿ ವಿದ್ಯುತ್ ಬಿಲ್,

## ನೀರು ಮತ್ತು ಆಸ್ತಿ ಕರ ಬಾಕಿ ಉಳಿಸಿಕೊಂಡ ಬ್ರಿಮ್ಸ್




ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 05 : ಬೀದರ್ ಜಿಲ್ಲಾಸ್ಪತ್ರೆ ಬ್ರಿಮ್ಸ್ ಕೊಟ್ಯಾಂತರ ರೂಪಾಯಿ ಬಿಲ್ ಮತ್ತು ತೆರಿಗೆ ಬಾಕಿ ಉಳಿಸಿಕೊಂಡಿದೆ. ಬ್ರಿಮ್ಸ್ ಆಸ್ಪತ್ರೆ ಕಳೆದ 15 ವರ್ಷಗಳಿಂದ ನೀರಿನ, ಆಸ್ತಿ ಕರ ಮತ್ತು ವಿದ್ಯುತ್ ಬಿಲ್ ಪಾವತಿಸಿಲ್ಲ. 10.98 ಕೋಟಿ ರೂ.ಬಾಕಿ ಉಳಿಸಿಕೊಂಡಿದೆ. ಇದರಲ್ಲಿ ನೀರಿನ ಕರ 1.45 ಕೋಟಿ ರೂ. ಮತ್ತು ಆಸ್ತಿ ಕರ8.32 ಕೋಟಿ ರೂ. ಬಾಕಿ ಇದೆ. ಈ ಹಿನ್ನೆಲೆಯಲ್ಲಿ ಬೀದರ್ ನಗರ ಸಭೆ ನೀರಿನ ಕರ, ಆಸ್ತಿ ಕರ ಪಾವತಿಸುವಂತೆ ಹತ್ತಾರು ನೋಟೀಸ್ ನೀಡಿದ್ದರೂ ಸಹಿತ ಬ್ರಿಮ್ಸ್ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಈ ಹಿನ್ನೆಲೆಯಲ್ಲಿ ನೀರು ಸರಬರಾಜು ನಿಲ್ಲಿಸುತ್ತೇವೆ ಎಂದು ನಗರ ಸಭೆಯ ಆಯುಕ್ತರು ಎಚ್ಚರಿಸಿದ್ದಾರೆ.

ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ಹಣ ವಸೂಲಾತಿಯಾಗುತ್ತಿಲ್ಲ. ನಗರ ಸಭೆಗೆ ತನ್ನ ಆದಾಯ ಮೂಲವೇ ತೆರಿಗೆ ಹಣ, ಆದರೆ ಅದನ್ನೇ ವಸೂಲಿ ಮಾಡದೆ ಹಾಗೇ ಬಿಟ್ಟರೆ ನಗರದ ಅಭಿವೃದ್ಧಿಯಾದರೂ ಹೇಗೆ ಆಗುತ್ತದೆ ಎಂದು ಸಾರ್ವಜನಿಕರು ಪ್ರಶ್ನಿಸಿದ್ದಾರೆ.

ಪ್ರತಿ ತಿಂಗಳು ಸ್ವಲ್ಪ ಸ್ವಲ್ಪ ತೆರಿಗೆ ವಸೂಲಿ ಮಾಡಿದ್ದರೇ ಇಷ್ಟೊತ್ತಿಗಾಗಲೇ ತೆರಿಗೆ ಹಣ ನಗರಸಭೆಗೆ ಬರುತ್ತಿತ್ತು ಆದರೆ ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ಕೋಟ್ಯಾಂತರ ರೂಪಾಯಿ ತೆರಿಗೆ ಹಣ ವಸೂಲಾಗದೆ ಹಾಗೆ ಉಳಿದಿದೆ. ಇದು ಸಹಜವಾಗಿಯೇ ಸಾರ್ವಜನಿಕರ ಆಕ್ರೋಶಕ್ಕೂ ಕೂಡಾ ಕಾರಣವಾಗಿದೆ. 2010 ರಿಂದ 2025ರ ಜನವರಿವರೆಗೆ ಬ್ರಿಮ್ಸ್ ಆಸ್ಪತ್ರೆಯಿಂದ ನೀರಿನ ಕರ ಹಾಗೂ ಆಸ್ತಿಕರ ಒಟ್ಟು

(2ನೇ ಪುಟ ನೋಡಿ)

# ಸಚಿನ್ ಪಾಂಚಾಳ್ ಆತ್ಮಹತ್ಯೆ ಪ್ರಕರಣ:

## ರಾಜು ಕಪನೂರ್‌ಗೆ ಷರತ್ತು ಬದ್ಧ ಜಾಮೀನು

ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 05 : ಸಚಿನ್ ಪಾಂಚಾಳ್ ಆತ್ಮಹತ್ಯೆ ಪ್ರಕರಣದಲ್ಲಿ ಬಂಧಿತರಾದ ರಾಜು ಕಪನೂರ್ ಗೆ ತನ್ನ ಹುಟ್ಟು ಹಬ್ಬದ ದಿನದಂದೇ ಷರತ್ತು ಬದ್ಧ ಜಾಮೀನು ಸಿಕ್ಕಿದೆ. ಇಂದು ಜಾಮೀನು ಅರ್ಜಿಯ ವಿಚಾರಣೆ ನಡೆಸಿದ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯವು ಷರತ್ತು



ಬದ್ಧ ಜಾಮೀನು ಮಂಜೂರು ಮಾಡಿದೆ. ಅರ್ಜಿದಾರರ ಹತ್ತಿರ ಶಸ್ತ್ರಾಸ್ತ್ರಗಳಿದ್ದಲ್ಲಿ ಕಲಬುರ್ಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅವರಿಗೆ ಒಪ್ಪಿಸಬೇಕು. ಅವರು ಸಾಕ್ಷಿನಾಶಪಡಿಸಲು ಪ್ರಯತ್ನಿಸದೆ, ತನಿಖೆಗೆ ಸಹಕರಿಸಬೇಕು. ತನಿಖಾಧಿಕಾರಿಯು ಅವರಿಗೆ ನಿರ್ದಿಷ್ಟವಾಗಿ ಸಮನ್ಸ್ ನೀಡಿದಾಗ ತನಿಖಾ ಉದ್ದೇಶಕ್ಕಾಗಿ ಹೊರತುಪಡಿಸಿ ಯಾವುದೇ ಕಾರಣಕ್ಕೂ ಬೀದರ್ ಜಿಲ್ಲೆಗೆ

(2ನೇ ಪುಟ ನೋಡಿ)

# ಕೇಜ್ರಿವಾಲ್ ಹ್ಯಾಟ್ರಿಕ್ ಕನಸಿಗೆ ಬ್ರೇಕ್;

## ಚುನಾವಣೋತ್ತರ ಸಮೀಕ್ಷೆಯಲ್ಲಿ :ಬಿಜೆಪಿಗೆ ಮುನ್ನಡೆ

ನವದೆಹಲಿ:ಫೆ.5:ದೆಹಲಿ ವಿಧಾನಸಭೆಯ ಎಲ್ಲಾ 70 ಸ್ಥಾನಗಳಿಗೂ ಬುಧವಾರ ಮತದಾನ ನಡೆದಿದ್ದು ಮತ ಎಣಿಕೆ ಫೆಬ್ರವರಿ 8ರಂದು ನಡೆಯಲಿದೆ. ಈ ಚುನಾವಣೆಯಲ್ಲಿ ಆಡಳಿತಾರೂಢ ಎಎಪಿ, ಬಿಜೆಪಿ ಮತ್ತು ಕಾಂಗ್ರೆಸ್ ನಡುವೆ ತ್ರಿಕೋನ ಸ್ಪರ್ಧೆ ಏರ್ಪಟ್ಟಿದೆ. ಮತದಾನ ಮುಗಿದ ನಂತರ, ವಿವಿಧ ಸಂಸ್ಥೆಗಳು ಚುನಾವಣೋತ್ತರ ಸಮೀಕ್ಷೆಯ ಫಲಿತಾಂಶಗಳನ್ನು ಬಿಡುಗಡೆ ಮಾಡಿವೆ. ಬಹುತೇಕ ಚುನಾವಣೋತ್ತರ ಫಲಿತಾಂಶಗಳಲ್ಲಿ ಬಿಜೆಪಿಗೆ ಗೆಲುವು ಎಂದು ತೋರಿಸುತ್ತಿದ್ದರೆ ಎರಡಲ್ಲಿ ಮಾತ್ರ ಮತ್ತೆ ಆಪ್ ಮೂರನೇ ಬಾರಿಗೆ ಗೆಲ್ಲಲಿದೆ ಎಂದು ಹೇಳಿದೆ.

ಪೀಪಲ್ಸ್ ಪಲ್ಸ್ ಮತ್ತು ಕೊಡ್ಮೋ ತಮ್ಮ ನಿರ್ಗಮನ ಸಮೀಕ್ಷೆಗಳಲ್ಲಿ ಬಿಜೆಪಿ 51-60 ಸ್ಥಾನಗಳನ್ನು ಗೆಲ್ಲುತ್ತದೆ ಎಂದು ಭವಿಷ್ಯ ನುಡಿದಿವೆ. ಆಮ್ ಆದ್ಮಿ ಪಕ್ಷವು ಭಾರಿ ಸೋಲನ್ನು ಎದುರಿಸಬೇಕಾಗುತ್ತದೆ. ಈ ಚುನಾವಣೆಯಲ್ಲಿ ಆಮ್ ಆದ್ಮಿ ಪಕ್ಷ 20 ಸ್ಥಾನಗಳಿಗಿಂತ ಕಡಿಮೆ ಸ್ಥಾನಗಳನ್ನು ಗಳಿಸಬಹುದು. ಆದರೆ ಕಾಂಗ್ರೆಸ್ ಒಂದೇ ಒಂದು ಸ್ಥಾನವನ್ನೂ ಪಡೆಯುವುದಿಲ್ಲ ಎಂದು ನಿರೀಕ್ಷಿಸಲಾಗಿದೆ.

ಪಿ-ಮಾರ್ಕ್ ಚುನಾವಣೋತ್ತರ ಸಮೀಕ್ಷೆಯಲ್ಲಿ ಬಿಜೆಪಿ ಗೆಲ್ಲುತ್ತದೆ

(2ನೇ ಪುಟ ನೋಡಿ)

# ಫೈನಾನ್ಸಿಯರ್‌ಗೆ

## 7.18 ಲಕ್ಷ ರೂ. ವಂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.5-ಫೈನಾನ್ಸ್ ಕಂಪನಿ ಗ್ರೂಪ್ ಪ್ರೊಜೆಕ್ಟ್‌ಗಳಿಗೆ ಪ್ರಮೋಷನ್ ಹೆಸರಿನಲ್ಲಿ ಹಣ ಹೂಡಿಕೆ ಮಾಡಿಸಿಕೊಂಡು ಹೆಚ್ಚಿನ ಕಮೀಷನ್ ಹಣ ಗಳಿಸಬಹುದು ಎಂಬ ಆಮಿಷ ಒಡ್ಡಿ ಫೈನಾನ್ಸಿಯರ್ ಒಬ್ಬರಿಗೆ 7,18,776 ರೂಪಾಯಿ ವಂಚನೆ ಮಾಡಿರುವ ಪ್ರಕರಣ ಬೆಳಕಿಗೆ ಬಂದಿದೆ.

(2ನೇ ಪುಟ ನೋಡಿ)

# ರನ್ನ ನಗರ ಸಜ್ಜುಗೊಳಿಸಲು

## 1 ಕೋಟಿ ಅನುದಾನ : ತಿಮ್ಮಾಪೂರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ : ಫೆ 05 : ಇದೇ ಫೆಬ್ರವರಿ 22 ರಿಂದ 23 ವರೆಗೆ ನಡೆಯಲಿರುವ ರನ್ನವೈಭವದ ಹಿನ್ನಲೆಯಲ್ಲಿ ಮುಧೋಳ ನಗರವನ್ನು ಶೃಂಗರಿಸಲು ಒಂದು ಕೋಟಿ ರೂ. ಅನುದಾನ ಬಿಡುಗಡೆ ಮಾಡಲಾಗಿದೆ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದರು.

ಮುಧೋಳ ನಗರದ ರನ್ನ ಭವನದಲ್ಲಿ ಬುಧವಾರ ರನ್ನವೈಭವದ ಲೋಗೊ, ಪ್ರಚಾರದ ಪೋಸ್ಟ ಹಾಗೂ ಆಡಿಯೋ ಬಿಡುಗಡೆ ಮಾಡಿ ಮಾತನಾಡಿದ ಅವರು ಮುಧೋಳ ನಗರದ ಪ್ರಮುಖ ರಸ್ತೆ, ವೃತ್ತಗಳಿಗೆ ದೀಪಾಲಂಕಾರ ಮಾಡುವದ ಜೊತೆಗೆ 25 ಲಕ್ಷ ವೆಚ್ಚದಲ್ಲಿ ರನ್ನವೃತ್ತ ಅಭಿವೃದ್ಧಿ ಪಡಿಸಲಾಗುತ್ತಿದೆ. ಈ ವೈಭವದಲ್ಲಿ ಸಾಂಸ್ಕೃತಿ ಕಾಯಾಕ್ರಮಗಳ ಜೊತೆಗೆ ಗ್ರಾಮೀಣ ಕ್ರೀಡೆಗಳಿಗೂ ಹೆಚ್ಚಿನ ಮಹತ್ವ ಕೊಡಲಾಗುತ್ತಿದೆ. ಈ ಭಾಗದ ಮಲ್ಲಕಂಬ, ಕುಸ್ತಿ, ಕಬಡ್ಡಿ ಮುಂತಾದ ಕ್ರೀಡೆಗಳನ್ನು ಸಹ ಆಯೋಜಿಸಲಾಗುತ್ತಿದೆ ಎಂದು ತಿಳಿಸಿದರು.

(2ನೇ ಪುಟ ನೋಡಿ)

# ಜೈಲಿನ ಮುಖ್ಯ ಅಧೀಕ್ಷಕಿ ನೆರವು: ಕೈದಿ ಬಿಡುಗಡೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಫೆ.5:ಸನ್ನಡತೆ ಆಧಾರದ ಮೇಲೆ ಬಿಡುಗಡೆ-ಯಾದರೂ ಜೈಲಿನಲ್ಲೇ ಇದ್ದ ಕೈದಿಗೆ ಜೈಲಾಧಿಕಾರಿಗಳು ಸಹಾಯ ಮಾಡುವ ಮೂಲಕ ಮಾನವೀಯತೆ ಮೆರೆದಿದ್ದಾರೆ. ರಾಯಚೂರು ಜಿಲ್ಲೆಯ ಲಿಂಗಸೂರು ತಾಲ್ಲೂಕಿನ ದುರ್ಗಪ್ಪ ಎಂಬುವರು ಕೊಲೆ ಪ್ರಕರಣದಲ್ಲಿ 2013ರಲ್ಲಿ ಜೈಲು ಸೇರಿದ್ದರು. ಬಳಿಕ, ಪ್ರಕರಣ ಸಾಬೀತಾಗಿದ್ದರಿಂದ ದುರ್ಗಪ್ಪ ಜೀವಾವಧಿ ಶಿಕ್ಷೆಕೆಗೆ ಒಳಗಾಗಿದ್ದರು. ನಂತರ ಅವರು ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಕಂಬಿ ಎಣಿಸುತ್ತಿದ್ದರು.

ಬಳಿಕ, 2023ರ ನವೆಂಬರ್‌ನಲ್ಲಿ ದುರ್ಗಪ್ಪ ಅವರನ್ನು ಸನ್ನಡತೆ ಆಧಾರದ ಮೇಲೆ ಬಿಡುಗಡೆಗೊಳಿಸಲಾಗಿತ್ತು.



ಆದರೆ, ನ್ಯಾಯಾಲಯ ವಿಧಿಸಿದ್ದ ದಂಡ ಕಟ್ಟಬೇಕಾಗಿತ್ತು. ಆದರೆ, ದುರ್ಗಪ್ಪ ಅವರ ಬಳಿ ಹಣವಿರಲಿಲ್ಲ. ಹೀಗಾಗಿ ಜೈಲಿನಿಂದ ಬಿಡುಗಡೆಯಾದರೂ ಹಣವಿಲ್ಲದೇ ಜೈಲಿನಲ್ಲಿ ಕಂಬಿ ಎಣಿಸುತ್ತಿದ್ದರು. ಜೈಲಾಧಿಕಾರಿಗಳು ದುರ್ಗಪ್ಪನ ಸಂಬಂಧಿಕರಿಗೆ ಕರೆ ಮಾಡಿ ವಿಚಾರ ತಿಳಿಸಿದ್ದರು. ಆದರೆ, ದುರ್ಗಪ್ಪ ಸಂಬಂಧಿಕರು ಕ್ಯಾರೆ ಎನ್ನಲಿಲ್ಲ. ಅಲ್ಲದೇ, ಕೆಲ ಎನ್‌ಜಿಓಗಳನ್ನು ಸಂಪರ್ಕ ಮಾಡಿದ್ದ ಕೇಂದ್ರ ಕಾರಾಗೃಹದ ಮುಖ್ಯ ಅಧೀಕ್ಷಕಿ ಆರ್. ಅನಿತಾ ಅವರು ದುರ್ಗಪ್ಪರಿಗೆ ಸಹಾಯ ಮಾಡುವಂತೆ ಮನವಿ ಮಾಡಿದ್ದರು. ಅದರೂ, ಅಲ್ಲಿಂದಲೂ ನಿರೀಕ್ಷಿತ ಫಲ ಸಿಕ್ಕಿರಲಿಲ್ಲ.

ಆದರೆ, ವಯೊವೃದ್ದರಾಗಿದ್ದ ದುರ್ಗಪ್ಪರಿಗೆ ಜೈಲಿನಿಂದ ಬಿಡುಗಡೆಯಾಗುವ ಹಂಬಲವಿತ್ತು. ಅದರೆ, ಕಿತ್ತು ತಿನ್ನುವ ಬಡತನ

(2ನೇ ಪುಟ ನೋಡಿ)

# ಪುನೀತ್ ಸ್ಮರಣಾರ್ಥ ರಂಗೋಲಿ ಸ್ಪರ್ಧೆ 8ಕ್ಕೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 05 : ನಟ ಪುನೀತ್ ರಾಜಕುಮಾರ ಸ್ಮರಣಾರ್ಥ ತಾಲ್ಲೂಕಿನ ಮನ್ನಳ್ಳಿ ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಶಾಲೆ ಆವರಣದಲ್ಲಿ ಫೆ. 8 ರಂದು ವಿದ್ಯಾರ್ಥಿಗಳಿಗೆ ರಂಗೋಲಿ ಸ್ಪರ್ಧೆ ಹಮ್ಮಿಕೊಳ್ಳಲಾಗಿದೆ.

ಬೆಳಿಗ್ಗೆ 11 ರಿಂದ ಮಧ್ಯಾಹ್ನ 12.45 ರ ವರೆಗೆ ಸ್ಪರ್ಧೆ ನಡೆಯಲಿದೆ ಎಂದು ಸ್ಪರ್ಧೆಯ ಆಯೋಜಕ, ನಾಗೋರಾ ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ನರಸಪ್ಪ ಜಾನಕನೋರ ತಿಳಿಸಿದ್ದಾರೆ.



ಪ್ರತಿ ಶಾಲೆಯಿಂದ ಇಬ್ಬರು ವಿದ್ಯಾರ್ಥಿಗಳಿಗೆ ಭಾಗವಹಿಸಲು ಅವಕಾಶ ಇದೆ. ವಿಜೇತರಿಗೆ ಪ್ರಥಮ, ದ್ವಿತೀಯ ಹಾಗೂ ತೃತೀಯ ಬಹುಮಾನ ಕೊಡಲಾಗುವುದು ಎಂದು ಹೇಳಿದ್ದಾರೆ. ಹೆಸರು ನೋಂದಣಿ ಹಾಗೂ ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂಖ್ಯೆ 9008066376 ಅಥವಾ 7411124053ಗೆ ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

# ಕೌಶಲ ಅಭಿವೃದ್ಧಿ ಕಾರ್ಯಾಗಾರ ನಾಳೆಯಿಂದ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 05 : ವಚನ ವಿಜಯೋತ್ಸವ ಅಂಗವಾಗಿ ಬಸವ ಕಾಯಕ, ದಾಸೋಹ ಫೌಂಡೇಷನ್ ವತಿಯಿಂದ ಇಲ್ಲಿಯ ಕೆ.ಇ.ಬಿ. ಕಚೇರಿ ರಸ್ತೆಯಲ್ಲಿ ಇರುವ ಐ.ಎಂ.ಎ. ಹಾಲನಲ್ಲಿ ಫೆ. 7 ರಿಂದ 9 ರ ವರೆಗೆ ಕೌಶಲ ಅಭಿವೃದ್ಧಿ ಕಾರ್ಯಾಗಾರ ಆಯೋಜಿಸಲಾಗಿದೆ.



ಫೆ. 7 ರಂದು ಬೆಳಿಗ್ಗೆ 9.30ಕ್ಕೆ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಡಾ. ಗಿರೀಶ್ ದಿಲೀಪ್ ಬದೋಲೆ ಕಾರ್ಯಾಗಾರ–ಕ್ಕೆ ಚಾಲನೆ ನೀಡುವರು. ಬಸವ ಸೇವಾ ಪ್ರತಿಷ್ಠಾನದ ಅಧ್ಯಕ್ಷೆ ಡಾ. ಅಕ್ಕ ಗಂಗಾಂಬಿಕೆ ಸಾನಿಧ್ಯ ವಹಿಸುವರು ಎಂದು ಬಸವ ಕಾಯಕ, ದಾಸೋಹ ಫೌಂಡೇಷನ್ ಅಧ್ಯಕ್ಷ ಬಸವರಾಜ ಧನ್ನೂರ ತಿಳಿಸಿದ್ದಾರೆ.

ಕಲಬುರಗಿಯ ಎಚ್.ಕೆ.ಇ. ಸಂಸ್ಥೆಯ ಆಡಳಿತ ಮಂಡಳಿ ಸದಸ್ಯ ಡಾ. ರಜನೀಶ್ ವಾಲಿ, ಕೆ.ಆರ್.ಇ. ಸಂಸ್ಥೆಯ ಕಾರ್ಯದರ್ಶಿ ಸತೀಶ ಪಾಟೀಲ, ಬಸವಕಲ್ಯಾಣ ಎಂಜಿನಿಯರಿಂಗ್ ಕಾಲೇಜು ನಿರ್ದೇಶಕ ಸಂತೋಷ ತಾಳಂಪಳ್ಳಿ, ಜಿ.ಎನ್.ಡಿ. ಎಂಜಿನಿಯರಿಂಗ್ ಕಾಲೇಜು ನಿರ್ದೇಶಕ ಸರ್ದಾರ್ ಪುನೀತಸಿಂಗ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಫೌಂಡೇಷನ್ ಅಧ್ಯಕ್ಷ ಬಸವರಾಜ ಧನ್ನೂರ ಅಧ್ಯಕ್ಷತೆ ವಹಿಸುವರು ಎಂದು ಹೇಳಿದ್ದಾರೆ.

ಕರ್ನಾಟಕ ಮಾಧ್ಯಮ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಪತ್ರಕರ್ತ ಶಶಿಕಾಂತ ಶೆಂಬೆಳ್ಳಿ, ಡಿ.ಬಿ. ಸನ್ ಟ್ರೈನಿಂಗ್ ಡಿವಿಜನ್ ಸಿಇಒ ಶಿವಾನಂದ ಡಿ.ವಿ. ಅವರನ್ನು ಸನ್ಮಾನಿಸಲಾಗುವುದು ಎಂದು ತಿಳಿಸಿದ್ದಾರೆ.

ವಚನ ವಿಜಯೋತ್ಸವ ಸಮಿತಿಯ ಕಾರ್ಯಾಧ್ಯಕ್ಷ ವಿಶ್ವನಾಥ ಕಾಜಿ, ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಜೊನ್ನಿಕೇರಿ, ರೋಟರಿ ಕಲ್ಯಾಣ ಝೋನ್ ಸಹಾಯಕ ಗವರ್ನರ್ ಸೂರ್ಯಕಾಂತ ರಾಮಶೆಟ್ಟಿ, ಹೈ ಐಡಿಯಲ್ಸ್ ಟೆಕ್ನಾಲಜೀಸ್ ಪ್ರೈವೇಟ್ ಲಿಮಿಟೆಡ್ ಸಿ.ಇ.ಒ. ಸಚ್ಚಿದಾನಂದ ಚಿದ್ರೆ ಉಪಸ್ಥಿತರಿರುವರು. ಫೌಂಡೇಷನ್ ಕಾರ್ಯದರ್ಶಿ ಸುವರ್ಣಾ ಬಿ. ಧನ್ನೂರ ಸ್ವಾಗತಿಸುವರು ಎಂದು ಹೇಳಿದ್ದಾರೆ.


# ರಮಾಬಾಯಿ ಜಯಂತ್ಯುತ್ಸವ, ಕೃತಿ ಬಿಡುಗಡೆ ನಾಳೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 05 : ನಗರದ ಅಂಬೇಡ್ಕರ್ ವೃತ್ತದಲ್ಲಿ ಫೆ. 7 ರಂದು ಸಂಜೆ 4ಕ್ಕೆ ರಮಾಬಾಯಿ ಅಂಬೇಡ್ಕರ್ ಜಯಂತ್ಯುತ್ಸವ, ಕೃತಿ ಬಿಡುಗಡೆ, ಆದರ್ಶ ದಂಪತಿ ಹಾಗೂ ಸೇವಾ ರತ್ನ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ.

ಮೈಸೂರಿನ ಉರಿಲಿಂಗ ಪೆದ್ದಿಮಠದ ಡಾ. ಜ್ಞಾನಪ್ರಕಾಶ ಸ್ವಾಮೀಜಿ ಉದ್ಘಾಟಿಸುವರು. ಆಣದೂರಿನ ಭಿಕ್ಕುಣಿ ಅರ್ಚಸ್ಮಿತಾ ಸಾನಿಧ್ಯ, ಕವಿತಾ ಶಿವಶರಣಪ್ಪ ಹುಗ್ಗಿ ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ, ಜಿಲ್ಲಾ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಗೋವಿಂದ ಪೂಜಾರಿ ಪ್ರಶಸ್ತಿ ಪ್ರದಾನ ಸಮಾರಂಭದ ಅಧ್ಯಕ್ಷತೆ ವಹಿಸುವರು.

ಧರ್ಮ ಪ್ರಚಾರಕಿ ಲಕ್ಷ್ಮಿ ಬಕ್ಕಪ್ಪ ಹೊಸಮನಿ ಮುಖ್ಯ ಅತಿಥಿಯಾಗಿ, ಸಹ ಶಿಕ್ಷಕಿ ಮಹಾದೇವಿ ಪ್ರೇಮಸಾಗರ್ ದಾಂಡೇಕರ್, ವಿದ್ಯಾನಿಕೇತನ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ನಾಗವೇಣಿ ಶಂಕರರಾವ್, ಮುಖ್ಯಶಿಕ್ಷಕಿ ಶೋಭಾವತಿ ಜಂಜಿರೆ, ಎಸ್.ಎಸ್.ಡಿ. ಮೇಜರ್ ಜನರಲ್ ಮಂಜುಳಾ ಭಾವಿದೊಡ್ಡಿ ಅತಿಥಿಗಳಾಗಿ ಭಾಗವಹಿಸುವರು.



ಅಶೋಕ ಆಲೂರಕರ್ ಪ್ರಾಸ್ತಾವಿಕವಾಗಿ ಮಾತನಾಡುವರು. ಸಂಘಪ್ರಿಯಾ ಡಿ. ಜ್ಯೋತಿ ಧಮ್ಮ ವಂದನೆ ಮಾಡುವರು. ಲೇಖಕ ದೀನೆ ವೀರಶೆಟ್ಟಿ ರಚಿತ ಡಾ. ಬಾಬಾ ಸಾಹೇಬ ಅಂಬೇಡ್ಕ???ರವರನ್ನು ನೆನೆಯುವ ಆ ದಿನಗಳು ಕೃತಿ ಬಿಡುಗಡೆ ಮಾಡಲಾಗುವುದು.

ನಾಟ್ಯಶ್ರೀ ನೃತ್ಯಾಲಯದ ಅಧ್ಯಕ್ಷೆ ರಾಣಿ ಸತ್ಯಮೂರ್ತಿ ನೃತ್ಯ ಪ್ರದರ್ಶಿಸುವರು. ಬೆಂಗಳೂರಿನ ಜಂಪೆ ಬಾಲು ತಂಡದವರು ಸಂಗೀತ, ನಾಟ್ಯಶ್ರೀ ನೃತ್ಯಾಲಯದ ಮಕ್ಕಳು ನೃತ್ಯ ಕಾರ್ಯಕ್ರಮ ನಡೆಸಿಕೊಡುವರು. ಜಿಲ್ಲಾ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದಿಂದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

# ಪತಂಜಲಿ ಶಾಲೆಯಲ್ಲಿ ಹಳದಿ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 05 : ನಗರದ ಕೆಇಬಿ ಕಾಲೊನಿಯ ಶ್ರೀ ಗಣೇಶ್ವರ ಚಾರಿಟಬಲ್ ಟ್ರಸ್ಟ್ ಸಂಚಾಲಿತ ಪತಂಜಲಿ ಪಬ್ಲಿಕ್ ಶಾಲೆಯಲ್ಲಿ ಬುಧವಾರ ಹಳದಿ ದಿನ ಆಚರಿಸಲಾಯಿತು.

ಹಳದಿ ಬಣ್ಣದ ಬಟ್ಟೆ ಧರಿಸಿ ಬಂದಿದ್ದ ವಿದ್ಯಾರ್ಥಿಗಳು, ತಮ್ಮೊಂದಿಗೆ ಹಳದಿ ಬಣ್ಣದ ವಸ್ತುಗಳು ಹಾಗೂ ಹಣ್ಣುಗಳನ್ನು ತಂದಿದ್ದರು. ಬಾಳೆ ಹಣ್ಣು, ನಿಂಬೆ ಹಣ್ಣು, ಅನಾನಸ್, ಕಸ್ಟರ್ಡ್, ರೇಸಿಂಗ್ ಕಾರು, ಟೆಡ್ಡಿ ಬೇರ್, ಗೊಂಬೆ, ಚೆ–ಂಡು, ಬಲೂನ್, ಹಾರುವ ಡಿಸ್ಕ್, ಹೂವು, ಟಿಫಿನ್ ಬಾಕ್ಸ್ ಮೊದಲಾದವು ಹಳದಿ ಬಣ್ಣದ್ದೇ ಆಗಿದ್ದವು.

ವಿದ್ಯಾರ್ಥಿಗಳು ಹಳದಿ ಬಣ್ಣದ ಕಿರೀಟ, ಸೂರ್ಯನ ಆಕೃತಿಯ ಮುಖವಾಡ ಧರಿಸಿ ಸಂಭ್ರಮಿಸಿದರು. ಶಾಲೆಯ ಶಿಕ್ಷಕರು ಸಹ ಹಳದಿ ಬಣ್ಣದ ವಸ್ತ್ರವನ್ನೇ ಧರಿಸಿದ್ದರು.

ಹಳದಿ ಪ್ರಕಾಶಮಾನವಾದ, ಹರ್ಷ ಚಿತ್ತದಿಂದ ಕೂಡಿದ ಬಣ್ಣವಾಗಿದೆ. ಸಂತೋಷದ ಭಾವನೆ ಮೂಡಿಸುತ್ತದೆ ಎಂದು ಟ್ರಸ್ಟ್ ಅಧ್ಯಕ್ಷೆ ಉಷಾ ಮಾರುತಿ ಮೇತ್ರೆ ತಿಳಿಸಿದರು.

ಶಾಲೆಯ ಆಡಳಿತಾಧಿಕಾರಿ ಬಸವರಾಜ ಜಿ. ಮುಗಟಾಪುರೆ, ಮುಖ್ಯಶಿಕ್ಷಕಿ ಸುಪ್ರಿಯಾ ಕುಲಕರ್ಣಿ, ಶಿಕ್ಷಕಿಯರಾದ ಶಾರದಾ ಜ್ಯಾಂತಿಕರ್, ಅನಿತಾ ಕಾಂಬಳೆ, ವನಿತಾ ಕುಲಕರ್ಣಿ, ಶಿವಮಂಗಲಾ ಪಾಟೀಲ, ಪೂಜಾ ಕೋಳಿ, ಪವಿತ್ರಾ ಸ್ವಾಮಿ, ಶ್ರುತಿ ತಲಾರಿ ಇದ್ದರು.

# ಪರ ಭಾಷೆಯಲ್ಲಿ ಜಾಹೀರಾತು ಫಲಕ: ಕ್ರಮಕ್ಕೆ ಕರವೇ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 05 : ನಗರದಲ್ಲಿ ನಿಯಮ ಉಲ್ಲಂಘಿಸಿ ಪರ ಭಾಷೆಯಲ್ಲಿ ಜಾಹೀರಾತು ಫಲಕ ಅಳವಡಿಸುತ್ತಿರುವ ಖಾಸಗಿ ಶಿಕ್ಷಣ ಸಂಸ್ಥೆಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾ ಘಟಕದ ಅಧ್ಯಕ್ಷ ಸೋಮನಾಥ ಮುಧೋಳ ಆಗ್ರಹಿಸಿದ್ದಾರೆ.



ಮೇಲುಗಡೆ ಶೇ 60 ರಷ್ಟು ಭಾಗದಲ್ಲಿ ಕನ್ನಡ ಬಳಸಬೇಕೆಂಬ ಸರ್ಕಾರದ ನಿಯಮವನ್ನು ಕೆಲ ಶಿಕ್ಷಣ ಸಂಸ್ಥೆಗಳು ಗಾಳಿಗೆ ತೂರುತ್ತಿವೆ ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಕನ್ನಡ ಭಾಷೆಯನ್ನು ಉಳಿಸಿ, ಬೆಳೆಸುವಲ್ಲಿ ಶಿಕ್ಷಣ ಸಂಸ್ಥೆಗಳ ಪಾತ್ರ ಮುಖ್ಯವಾದದ್ದು. ಅವುಗಳಿಂದಲೇ ಕನ್ನಡದ ಕಡೆಗಣನೆ ಆಗುತ್ತಿರುವುದು ಕಳವಳದ ಸಂಗತಿ ಎಂದು ಹೇಳಿದ್ದಾರೆ.

ಜಾಹೀರಾತು ಫಲಕಗಳಲ್ಲಿ ಕನ್ನಡ ಬಳಕೆಗೆ ಸಂಬಂಧಿಸಿದಂತೆ ನಗರಸಭೆ ಜಾಗೃತಿ ಮೂಡಿಸುತ್ತಿದ್ದರೂ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿದ್ದಾರೆ.

ನಿಯಮ ಉಲ್ಲಂಘಿಸಿ ಜಾಹೀರಾತು ಫಲಕ ಅಳವಡಿಸುತ್ತಿರುವ ಶಿಕ್ಷಣ ಸಂಸ್ಥೆಗಳ ವಿರುದ್ಧ ಪ್ರಕರಣ ದಾಖಲಿಸಿ, ಮಾನ್ಯತೆ ರದ್ದುಪಡಿಸಬೇಕು. ಪ್ರಿಂಟಿಂಗ್ ಪ್ರೆ???ಗಳ ಮೇಲೂ ಪ್ರಕರಣ ದಾಖಲಿಸಬೇಕು ಎಂದು ಒತ್ತಾಯಿಸಿದ್ದಾರೆ.

ಕನ್ನಡ ಭಾಷೆಯನ್ನು ಕಡೆಗಣಿಸುವ ಶಿಕ್ಷಣ ಸಂಸ್ಥೆಗಳ ವಿರುದ್ಧ ವೇದಿಕೆ ಹೋರಾಟ ನಡೆಸಲಿದೆ ಎಂದು ಎಚ್ಚರಿಸಿದ್ದಾರೆ.

# ಫೆ.07 ರಂದು ವಿವಿಧ ಮಹನೀಯರ ಜಯಂತಿಯ ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, ಫೆ.05: ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜಿಲ್ಲಾ ಕೇಂದ್ರದಲ್ಲಿ ಫೆ.15 ರಂದು ಸಂತ ಸೇವಾಲಾಲ್ ಜಯಂತಿ, ಫೆ.19 ರಂದು ಛತ್ರಪತಿ ಶಿವಾಜಿ ಜಯಂತಿ ಹಾಗೂ ಫೆ.20 ರಂದು ಸಂತ ಕವಿ ಸರ್ವಜ್ಞ ಜಯಂತಿ ಆಚರಣೆ ಕುರಿತು ಫೆ.07 ರಂದು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಏರ್ಪಡಿಸಲಾಗಿದೆ.

ಫೆ.07 ರಂದು ಸಂಜೆ 04 ಗಂಟೆಗೆ ಸಂತ ಸೇವಾಲಾಲ್ ಜಯಂತಿ, 04.30 ಗಂಟೆಗೆ ಛತ್ರಪತಿ ಶಿವಾಜಿ ಜಯಂತಿ, 05 ಗಂಟೆಗೆ ಸಂತ ಕವಿ ಸರ್ವಜ್ಞ ಜಯಂತಿ ಆಚರಣೆ ಕುರಿತು ಪೂರ್ವಭಾವಿ ಸಭೆ ನಡೆಯಲಿದೆ.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಅಧ್ಯಕ್ಷತೆ ವಹಿಸುವರು.

ಸಭೆಗೆ ಸಮುದಾಯದ ಮುಖಂಡರು, ಜಿಲ್ಲಾ ಮಟ್ಟದ ಅಧಿಕಾರಿಗಳು ತಪ್ಪದೇ ಹಾಜರಾಗಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ತಿಳಿಸಿದ್ದಾರೆ.

## ಆರ್‌ಎಸ್ ಗ್ರೌಂಡ್‌ನಲ್ಲಿ ಕಿವುಡ ಮಾಡಿದ ಕಿತಾಪತಿ ನಾಟಕಕ್ಕೆ ಸಂಭ್ರಮದ ಚಾಲನೆ

# ನಾಟಕ ವೀಕ್ಷಿಸಿ ಕಲಾವಿದರಿಗೆ ಪ್ರೋತ್ಸಾಹಿಸಿ: ರವೀಂದ್ರ ಸ್ವಾಮಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 05 : ಇಂದಿನ ಮೊಬೈಲ್ ಯುಗದಲ್ಲಿ ನಾಟಕಗಳು ಸೇರಿದಂತೆ ಜನಪದ ಕಲೆಗಳ ಮಹತ್ವ ಕಡಿಮೆಯಾಗುತ್ತ ಬರುತ್ತಿವೆ. ಹೀಗಾಗಿ ಮೊದಲನೇ ಬಾರಿ ಶಿರಡಿ ಸಾಯಿ ಬಾಬಾ ನಾಟಕ ಕಂಪನಿ ಮಾಲಿಕರಾದ ಬಸವರಾಜ ಕಟ್ಟಿಮನಿ ಹಾಗೂ ಜನಪದ ಗಾಯಕ ಎಸ್‌ಬಿ ಕುಚಬಾಳ ಅವರು ನಮ್ಮ ಕಚೇರಿಗೆ ಭೇಟಿಯಾಗಲು ಬಂದಾಗ ಸ್ಥಳಾವಕಾಶ ಕೇಳಿದ್ರು. ಕಲೆಯನ್ನು ಉಳಿಸಿ ಬೆಳೆಸಬೇಕು. ಕಲಾವಿದರ ಬದುಕು ಹಸನಾಗಬೇಕೆಂದು ನಮ್ಮ ಆರ್‌ಎಸ್ ಗ್ರೌಂಡ್‌ನಲ್ಲಿ ನಾಟಕ ನಡೆಸಿಕೊಳ್ಳಿ ಎಂದು ಅವಕಾಶ ಕೊಟ್ಟೆ ಎಂದು ಏಕತಾ ಫೌಂಡೇಶನ್ ಅಧ್ಯಕ್ಷರಾದ ಶ್ರೀ ರವೀಂದ್ರ ಸ್ವಾಮಿ ತಿಳಿಸಿದರು. ನಗರದ ಗುಂಪಾ ರಸ್ತೆಯ ಆರ್‌ಎಸ್ ಗ್ರೌಂಡ್‌ನಲ್ಲಿ ನೂತನವಾಗಿ ಶ್ರೀ ಶಿರಡಿ ಸಾಯಿ ಬಾಬಾ ನಾಟಕ ಕಂಪನಿ ವತಿಯಿಂದ ನಡೆಸುತ್ತಿರುವ ಕಿವುಡ ಮಾಡಿದ ಕಿತಾಪತಿ ನಾಟಕಕ್ಕೆ ಚಾಲನೆ ನೀಡಿ ಮಾತನಾಡಿದರು. ತುಂಬಾ ಅದ್ಭುತವಾದ ನಾಟಕ ಮಾಡುತ್ತಿದ್ದಾರೆ. ಕಲಾವಿದರು ನಕ್ಕುನಗಿಸುತ್ತಿದ್ದಾರೆ. ಇದನ್ನು ನೋಡಿ ನಮಗೆಲ್ಲ ಬಾಲ್ಯದ ನೆನಪಾದವು. ಹುಮನಾಬಾದ ಜಾತ್ರೆಯಲ್ಲಿ ಮೊದಲು ನಾಟಕ ನೋಡಿದ್ದೇವು ಎಂದು ರವೀಂದ್ರ ಸ್ವಾಮಿಯವರು ತಮ್ಮ ಬಾಲ್ಯದ ನೆನಪುಗಳನ್ನು ಮೆಲುಕಾಡಿಸಿದರು.



ನಗರಸಭೆ ಸದಸ್ಯರಾದ ದಿಗಂಬರ ಮಡಿವಾಳ ಅವರು ಮಾತನಾಡಿ ರವೀಂದ್ರ ಸ್ವಾಮಿಯವರು ಉಚಿತವಾಗಿ ಕಲಾವಿದರಿಗೆ ಸ್ಥಳಾವಕಾಶ ಮಾಡಿಕೊಟ್ಟಿದ್ದಾರೆ. ಮನುಷ್ಯ ಹುಟ್ಟಿದ ಮೇಲೆ ಏನಾದರೂ ಸಾಧಿಸಬೇಕು. ಹುಟ್ಟು ಸಾವುಗಳ ಮಧ್ಯೆ ನಮ್ಮ ಹೆಸರು ಗಳಿಸಿಕೊಂಡು ಹೋಗಬೇಕು. ಅಂತಹ ಹೆಸರು ಶಿರಡಿ ಸಾಯಿ ಬಾಬಾ ನಾಟಕ ಕಂಪನಿಯವರಿಗೆ ಸಿಗಲಿ. ಕಲಾವಿದರು ಉತ್ತಮವಾಗಿ ಪ್ರಯತ್ನ ಮಾಡುತ್ತಿದ್ದಾರೆ. ಬಸವರಾಜ ಕಟ್ಟಿಮನಿ ಅವರಿಗೆ ಹಾಗೂ ಅವರ ತಂಡದವರಿಗೆ ಯಶಸ್ಸು ಸಿಗಲಿ. ಬೀದರ ಜಿಲ್ಲೆಗೆ ಕೀರ್ತಿ ತರುವಂತಾಗಲಿ. ಅದಕ್ಕೆ ಬೇಕಾದ ಸಹಕಾರ ನೀಡಲಾಗುವುದು ಎಂದು ತಿಳಿಸಿದರು. ಲಹರಿ ಡೆವೆಲಪರ್ಸ್ನ ವ್ಯವಸ್ಥಾಪಕ ನಿರ್ದೇಶಕರಾದ ಸಂತೋಷ ಪಾಟೀಲ ಅವರು ಮಾತನಾಡಿ ಚಲನಚಿತ್ರಗಳಲ್ಲಿ ಎಡಿಟ್ ಮಾಡಿ ಅಭಿನಯ ತೋರಿಸುತ್ತಾರೆ. ಆದರೆ ಕಲಾವಿದರು ನೇರವಾಗಿ ಕಣ್ಣೆದುರೆ ಕಲಾಪ್ರದರ್ಶನ ಮಾಡುತ್ತಾರೆ. ಇವರೇ ನಿಜವಾದ ಕಲಾವಿದರು ಎಂದು ಶ್ಲಾಘಿಸಿದರು. ಅಲ್ಲದೇ ಗ್ರಾಮ ಪಂಚಾಯತ್‌ಗಳಲ್ಲಿ ನಿಮ್ಮ ನಾಟಕಗಳನ್ನು ಪ್ರದರ್ಶನ ಮಾಡಲು ಅವಕಾಶ ಕಲ್ಪಿಸಿಕೊಡಲು ಪ್ರಯತ್ನ ಮಾಡುತ್ತೇನೆ. ಅದಕ್ಕೆ ಬೇಕಾದ ಇಂದಿಷ್ಟು ಸಹಾಯಧನ ಕೂಡಾ ಕೊಡಿಸುವ ಪ್ರಯತ್ನ ಮಾಡುತ್ತೇನೆ. ಬೀದರ ನಗರದ ಜನತೆ ತಪ್ಪದೇ ಈ ನಾಟಕ ವೀಕ್ಷಿಸಿ ಕಲಾವಿದರಿಗೆ ಪ್ರೋತ್ಸಾಹಿಸಬೇಕೆಂದು ತಿಳಿಸಿದರು.

ಇದೇ ವೇಳೆ ವೇದಿಕೆ ಮೇಲೆ ರಾಜಕುಮಾರ ಪಾಟೀಲ, ರಮೇಶ ಪಾಟೀಲ ಚಿಟ್ಟಾ, ಸಿದ್ರಾಮಯ್ಯ ಸ್ವಾಮಿ, ಎಸ್.ಬಿ.ಕುಚಬಾಳ, ನಂದುಕುಮಾರ ಪಾಟೀಲ, ನಾಟಕ ಕಂಪನಿ ಮಾಲಿಕರಾದ ಬಸವರಾಜ ಕಟ್ಟಿಮನಿ, ಉದ್ಯಮಿ ಜೀವನ್, ಅಶೋಕ ಬೂದಿಹಾಳ ಸೇರಿದಂತೆ ಶ್ರೀ ಶಿರಡಿ ಸಾಯಿ ಬಾಬಾ ನಾಟಕ ಕಂಪನಿಯ ಎಲ್ಲಾ ಕಲಾವಿದರು ಹಾಗೂ ಪ್ರೇಕ್ಷಕರು ಉಪಸ್ಥಿತರಿದ್ದರು.

# ವಿಕಲಚೇತನ ಕಲ್ಯಾಣ ಕಾರ್ಯಕ್ರಮದಡಿ ಅರ್ಜಿ ಆಹ್ವಾನ

ಕಲಬುರಗಿ, ಫೆ.05: ಕಲಬುರಗಿ ಮಹಾನಗರಪಾಲಿಕೆಯ ಎಸ್.ಎಫ್.ಸಿ. ಕ್ರಿಯಾ ಯೋಜನೆಯಡಿ ನಿಗದಿಪಡಿಸಿದ ಯೋಜನೆಗಳಿಗೆ 2024–25ನೇ ಸಾಲಿಗೆ ವಿಕಲಚೇತನರಿಗೆ ಕಲ್ಯಾಣ ಕಾರ್ಯಕ್ರಮದ ಶೇ. 5ರ ಶಾಖೆಯ ಯೋಜನೆಯಾದ (2019–20ನೇ ಸಾಲಿನ) ಬುದ್ಧಿ ಮಾಂದ್ಯ ಮಕ್ಕಳಿಗೆ ಫೀಜಿಯೋಥರಫಿಗೆ ಒಳಪಡಿಸುವ ಸಲುವಾಗಿ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆ ಉಪ ಆಯುಕ್ತರು (ಆಡಳಿತ) ತಿಳಿಸಿದ್ದಾರೆ.

# ಬಸವಗಿರಿಯಲ್ಲಿ ಫೆ. 10 ರಿಂದ 12ರ ವರೆಗೆ 23ನೇ ವಚನ ವಿಜಯೋತ್ಸವ

## ಅಕ್ಕನ ಆಶಯ ಈಡೇರಿಸಲು ಮತ್ತು ವಚನ ಸಾಹಿತ್ಯಕ್ಕೆ ಪಟ್ಟಗಟ್ಟಲು ಬನ್ನಿ: ಡಾ.ಗಂಗಾಂಬಿಕಾ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 05 : 1995 ರಿಂದ ಶರಣ ಉದ್ಯಾನ ಮತ್ತು ಬಸವಗಿರಿಯಲ್ಲಿ ಪೂಜ್ಯ ಲಿಂ. ಅಕ್ಕ ಅನ್ನಪೂರ್ಣ ತಾಯಿಯವರು ಹಾಗೂ ನಾನು ಒಮ್ಮನಸ್ಸಿನಿಂದ ಬಸವ ತತ್ವಕ್ಕಾಗಿ ಜೀವನ ಮುಡುಪಾಗಿಟ್ಟು ಬಸವಾದಿ ಶರಣರ ಆಶಯಗಳನ್ನು ಪ್ರಚಾರ ಮತ್ತು ಪ್ರಸಾರಗೊಳಿಸಲು ಕಾರ್ಯಕ್ರಮಗಳನ್ನು ಮಾಡುತ್ತ ಬಂದಿದ್ದೇವೆ. ವಚನ ವಿಜಯೋತ್ಸವ ಅಕ್ಕನವರ ಉಸಿರಾಗಿತ್ತು. ಹೀಗಾಗಿ ಅಕ್ಕನವರ ಆಶಯ ಮತ್ತು ವಚನ ಸಾಹಿತ್ಯಕ್ಕೆ ಪಟ್ಟಗಟ್ಟಿ ವಿಜಯೋತ್ಸವ ಆಚರಿಸಲು ವಚನ ವಿಜಯೋತ್ಸವದಲ್ಲಿ ಪಾಲ್ಗೊಳ್ಳಿ ಎಂದು ಬಸವ ಸೇವಾ ಪ್ರತಿಷ್ಠಾನದ ಪೂಜ್ಯಶ್ರೀ ಡಾ. ಅಕ್ಕಗಂಗಾಂಬಿಕಾ ತಾಯಿ ತಿಳಿಸಿದರು. ಹಾರೂರಗೇರಿಯ ಬಸವೇಶ್ವರ ದೇವಸ್ಥಾನದಲ್ಲಿ ಆಯೋಜಿಸಿದ 23ನೇ 'ವಚನ ವಿಜಯೋತ್ಸವ' ದ ಪ್ರಚಾರ ಸಭೆಯಲ್ಲಿ ಮಾತನಾಡಿದರು. ಫೆ. 10, 11 ಮತ್ತು 12 ರಂದು ಪಾಪನಾಶ ಹಿಂಬದಿಯ ಬಸವಗಿರಿಯಲ್ಲಿ ನಡೆಯಲಿರುವ 23ನೇ ವಚನ ವಿಜಯೋತ್ಸವ ನಡೆಯಲಿದ್ದು, ಮೊದಲನೇ ದಿನ ಫೆ. 10 ರಂದು ಸಾಮೂಹಿಕ ಇಷ್ಟಲಿಂಗಪೂಜೆ ಹಾಗೂ ವಿವಿಧ ವಿಷಯಗಳ ಮೇಲೆ ಉಪನ್ಯಾಸ ಕಾರ್ಯಕ್ರಮ ಜರುಗಲಿವೆ. ಎರಡನೇ ದಿವಸ ಫೆ. 11 ರಂದು ಸಾಮೂಹಿಕ ವಚನ ಪಠಣ ಹಾಗೂ ಪಂಜಾಬ, ಹರಿಯಾಣ, ಜಮ್ಮುಕಾಶ್ಮೀರದಿಂದ ಆಗಮಿಸುವ ಕಲಾವಿದರಿಂದ ಆಕರ್ಷಕ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ಫೆ. 12 ರಂದು ನಗರದ ಬಸವೇಶ್ವರ ವೃತ್ತದಿಂದ ವಚನ ಕಟ್ಟುಗಳು ಹಾಗೂ ವಚನ ಸಾಹಿತ್ಯ ಭಂಡಾರವನ್ನು ತಲೆಮೇಲೆ ಹೊತ್ತು ಭವ್ಯ ಮೆರವಣಿಗೆ ನಡೆಯಲಿದೆ. ಆದ್ದರಿಂದ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಕೋರಿದರು.



ಖ್ಯಾತ ಪ್ರವಚನಕಾರರಾದ ಸುವರ್ಣ ಚಿಮಕೊಡೆ ಮಾತನಾಡಿ ವಚನ ವಿಜಯೋತ್ಸವ ಅಕ್ಕ ಅನ್ನಪೂರ್ಣ ತಾಯಿಯವರ ಆಶಯವಾಗಿತ್ತು. ಅದರಲ್ಲಿ ಅವರ ಆತ್ಮ ಅಡಗಿದೆ. ಅದನ್ನು ಮುಂದುವರೆಸಿಕೊಂಡು ಹೋಗುವುದು ನಮ್ಮ ನಿಮ್ಮೆಲ್ಲರ ಜವಾಬ್ದಾರಿಯಾಗಿದೆ. ಆದ್ದರಿಂದ ತಾವೆಲ್ಲರೂ ತನುಮನಧನದಿಂದ ಸಹಕರಿಸಬೇಕೆಂದು ಮನವಿ ಮಾಡಿಕೊಂಡರು. ಇದೇ ವೇಳೆ ವಚನ ವಿಜಯೋತ್ಸವದ ಭಿತ್ತಿ ಪತ್ರಗಳನ್ನು ಬಿಡುಗಡೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಅಕ್ಕನ ಬಳಗದ ಸಂಗೀತಾ ಮಲ್ಲಿಕಾರ್ಜುನ ಬಂತೆ, ಡಾ. ಶಾಂತಾಬಾಯಿ ಎಸ್. ಬಿರಾದಾರ, ಗಂಗಮ್ಮ ಸಾವಲೆ, ಸರಸ್ವತಿ ರಾಜಕುಮಾರ, ಅನುಶಬಾಯಿ ಡೊಣಗಾಪುರೆ, ಸಂಗೀತಾ ಸತೀಶ, ಸುರೇಖ ಶರಣಪ್ಪ, ರಾಜಕುಮಾರ ಕಾಜಿ, ಜೈಶ್ರೀ ರಾಜಕುಮಾರ ಕಾಜಿ, ಈರಮ್ಮ ಬಾಬುರಾವ ಐನಾಪುರೆ, ಈಶ್ವರಮ್ಮ ಬಿರಾದಾರ, ಈರಮ್ಮ ಸ್ವಾಮಿ, ಶಶಿಕಲಾ ಕಡ್ಡಿ, ಶ್ರೀದೇವಿ ಉಪ್ಪೆ, ಬಸವರಾಜ ಪಾಟೀಲ, ಮಲ್ಲಿಕಾರ್ಜುನ ಬಂತೆ, ಬಸವರಾಜ ಅಮಾಜಿ, ಓಂಪ್ರಕಾಶ ಪಾಟೀಲ, ಹಾವಶೆಟ್ಟಿ ಪಾಟೀಲ, ಮಲ್ಲಿಕಾರ್ಜುನ ಮಣಗಿರೆ, ರಾಜಕುಮಾರ ಪಾಟೀಲ, ರೇವಯ್ಯಾ ಸ್ವಾಮಿ, ಹಣಮಂತ ಬುಳ್ಳಾ, ಜಗನ್ನಾಥ ಕಾಜಿ, ಬಸವರಾಜ ಬಂತೆ ಸೇರಿದಂತೆ ಹಲವರಿದ್ದರು.

## ಲಿಂಗಸೂಗೂರು ಸಾರ್ವಜನಿಕ ಆಸ್ಪತ್ರೆಗೆ ಜಿಲ್ಲಾಧಿಕಾರಿ

# ನಿತೀಶ್ ಕೆ. ದಿಢೀರ್ ಭೇಟಿ; ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಫೆ.05: ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಬುಧವಾರ ಗ್ರಾಮೀಣ ಭಾಗದಲ್ಲಿ ಪ್ರವಾಸ ಕೈಗೊಂಡು ಲಿಂಗಸೂಗೂರು ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ಭೇಟಿ ನೀಡಿದರು.

ದಿಢೀರ್ ಭೇಟಿ ವೇಳೆ ಜಿಲ್ಲಾಧಿಕಾರಿಗಳು, ಆಸ್ಪತ್ರೆಯ ಪ್ರತಿಯೊಂದು ವಾರ್ಡಗಳಿಗೆ ತೆರಳಿ ಪರಿಶೀಲನೆ ನಡೆಸಿ ಚಿಕಿತ್ಸೆ ಪಡೆಯುತ್ತಿದ್ದ ರೋಗಿಗಳ ಜತೆ ಮಾತನಾಡಿದರು.

ನಂತರ ಆಸ್ಪತ್ರೆ ಲ್ಯಾಬ್ ಹಾಗೂ ಡಯಾಲಿಸಿಸ್ ಸೆಂಟರ್‌ಗೆ ತೆರಳಿದ ಅವರು, ಸೆಂಟರ್ ನಲ್ಲಿದ್ದ ಸಿಬ್ಬಂದಿ ಜೊತೆ ಮಾತನಾಡಿ ರೋಗಿಗಳಿಗೆ ಸರಿಯಾಗಿ ಚಿಕಿತ್ಸೆ ನೀಡಬೇಕು. ಸರ್ಕಾರಿ ಆಸ್ಪತ್ರೆಗೆ ಹೆಚ್ಚಾಗಿ ಬಡ ವರ್ಗದ ಜನರೇ ಬರುತ್ತಾರೆ. ಅವರೊಂದಿಗೆ ಸೌಜನ್ಯದಿಂದ ವರ್ತಿಸಬೇಕು. ಸಕಾಲಕ್ಕೆ ಗುಣಮಟ್ಟದ ಚಿಕಿತ್ಸೆ ನೀಡಬೇಕೆಂದು ಸೂಚಿಸಿದರು.

ನಂತರ ಮಹಿಳೆಯರ ವಾರ್ಡಗಳಲ್ಲಿದ್ದ ಬಾಣಂತಿಯರ ಆರೋಗ್ಯ ವಿಚಾರಿಸಿದರು. ಆಸ್ಪತ್ರೆಯಲ್ಲಿ ಸರಿಯಾದ ವೈದ್ಯಕೀಯ ಚಿಕಿತ್ಸಾ ಸೌಲಭ್ಯ ಸಿಗುತ್ತಿದೆಯೇ ಎಂದು ಕೇಳಿ ಮಾಹಿತಿ ಪಡೆದರು. ನಂತರ ಲ್ಯಾಬ್ ವೀಕ್ಷಣೆ ಮಾಡಿ ಅಲ್ಲಿನ ಸಿಬ್ಬಂದಿಯಿಂದ ಕೆಲ ಮಾಹಿತಿ ಪಡೆದರು. ಆಸ್ಪತ್ರೆಯ ಔಷಧಿ ಸಂಗ್ರಹ ಕೊಠಡಿಗೆ ಭೇಟಿ ನೀಡಿ ಔಷಧಿಗಳನ್ನು ಪರಿಶೀಲಿಸಿದರು.

ನಂತರ ತಾಯಿ ಮತ್ತು ಮಕ್ಕಳ ಸರ್ಕಾರಿ ಆಸ್ಪತ್ರೆಯ ಕಟ್ಟಡದ ಕಾಮಗಾರಿ ಪರಿಶೀಲಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಡಾ.ಸುರೇಂದ್ರ ಬಾಬು, ತಾಲೂಕು ಆರೋಗ್ಯಾಧಿಕಾರಿ ಡಾ.ಅಮರೇಶ್ ಪಾಟೀಲ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಗಣೇಶ, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ.ಶಿವುಕುಮಾರ್, ಸಮುದಾಯ ಆರೋಗ್ಯ ಅಧಿಕಾರಿ ರುದ್ರಗೌಡ ಸೇರಿದಂತೆ ಲಿಂಗಸೂಗೂರು ಪಟ್ಟಣದ ಸಾರ್ವಜನಿಕ ಆಸ್ಪತೆಯ ವಿವಿಧ ವಿಭಾಗದ ಮುಖ್ಯಸ್ಥರು ಇದ್ದರು.

# ಗಂಡಾಂತರ ಗರ್ಭಿಣಿಯರ

## ವಿಶೇಷ ಆರೋಗ್ಯ ತಪಾಸಣೆ ಶಿಬಿರ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಫೆ.05: ಜಿಲ್ಲೆಯ ಸಿಂಧನೂರು ತಾಲೂಕಿನ ತುರ್ವಿಹಾಳ ಪ್ರಾಥಮಿಕ ಆರೋಗ್ಯ ಕೇಂದ್ರದ ಗುಂಡಾ ಗ್ರಾಮದಲ್ಲಿ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿಗಳಾದ ಡಾ.ನಂದಿತಾ ಅವರ ನೇತೃತ್ವದಲ್ಲಿ ಬುಧವಾರ ದಂದು ಗಂಡಾಂತರ ಗರ್ಭಿಣಿಯರ ವಿಶೇಷ ಆರೋಗ್ಯ ತಪಾಸಣೆ ಶಿಬಿರ ಹಮ್ಮಿಕೊಳ್ಳಲಾಯಿತು.

ಈ ವೇಳೆ ಡಾ.ನಂದಿತಾ ಅವರು ಮಾತನಾಡಿ, ಗರ್ಭಿಣಿಯರಿಗೆ ಆರೋಗ್ಯ ಸೇವೆ ಒದಗಿಸುವ ನಿಟ್ಟಿನಲ್ಲಿ ಆರೋಗ್ಯ ಶಿಬಿರ ಹಮ್ಮಿಕೊಳ್ಳಲಾಗಿದ್ದು, ಸಿಂಧನೂರು ತಾಲೂಕಿನ ತುರ್ವಿಹಾಳ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ 06 ಗ್ರಾಮಗಳು ಹಾಗೂ 05 ಕ್ಯಾಂಪ್ ಒಳಗೊಂಡಿದ್ದು, ಒಟ್ಟು 6,588 ಜನಸಂಖ್ಯೆ ಕಂಡಬರುತ್ತದೆ. 1133 ಮನೆಗಳಲ್ಲಿ ಒಟ್ಟು 40 ಗರ್ಭಿಣಿಯರ ಸಂಖ್ಯೆ ಇದ್ದು ಅದರಲ್ಲಿ 26 ಗಂಡಾಂತರ ಗರ್ಭಿಣಿಯರನ್ನು ಗುರುತಿಸಲಾಗಿದೆ ಎಂದರು.

ಗಂಡಾಂತರ ಗರ್ಭಿಣಿಯರನ್ನು ಗುರುತಿಸಿ ಅವರಿಗೆ ಅಗತ್ಯವಿರುವ ಆರೋಗ್ಯ ಸೌಲಭ್ಯಗಳನ್ನು ಹಾಗೂ ಹೆಚ್ಚಿನ ಚಿಕಿತ್ಸೆ ಮತ್ತು ಗುರುತಿಸಿರುವ ಗರ್ಭಿಣಿಯರಿಗೆ ಪ್ರಾಥಮಿಕ ಹಂತದಲ್ಲಿ ಹೆಚ್ಚಿನ ಆರೋಗ್ಯ ಕಾಳಜಿ ವಹಿಸುವುದು ಸ್ಕ್ಯಾನಿಂಗ್, ರಕ್ತ ತಪಾಸಣೆ, ರಕ್ತ ಹೀನತೆಯಿಂದ ಬಳಲುತ್ತಿರುವ ಗರ್ಭಿಣಿಯರಿಗೆ ಎಫ್.ಸಿ.ಎಮ್ ಮತ್ತು ರಕ್ತ ವರ್ಗಾವಣೆಗಾಗಿ ಹತ್ತಿರದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ರೆಫರ್ ಮಾಡಲಾಗಿದೆ ಎಂದರು.

ಪ್ರತಿ ತಿಂಗಳು 9ನೇ ದಿನಾಂಕದಂದು ಪ್ರಾಥಮಿಕ ಆರೋಗ್ಯ ಕೇಂದ್ರದ ಹಂತದಲ್ಲಿಯೇ ವಿಶೇಷವಾಗಿ ಆರೋಗ್ಯ ಸೇವೆ ನೀಡಲಾಗುವುದು. ಹಾಗೂ ಪ್ರತಿ ವಾರ ಗರ್ಭಿಣಿಯರ ನೋಂದಣಿ, ಗರ್ಭಿಣಿಯರಿಗೆ ಲಸಿಕೆ ನೀಡುವುದು, ಗರ್ಭಿಣಿಯರಿಗೆ ಪೌಷ್ಠಿಕ ಆಹಾರ ಸೇವನೆ ಮಾಡುವ ಕುರಿತು ಗರ್ಭಿಣಿಯರಲ್ಲಿ ರಕ್ತ ಹೀನತೆ ಕುರಿತು ಜಾಗೃತಿ ಮೂಡಿಸುವುದರ ಬಗ್ಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿಗಳ ತಂಡದ ಸಿಬ್ಬಂದಿ, ಸಿಂಧನೂರು ತಾಲೂಕ ಆರೋಗ್ಯಾಧಿಕಾರಿ, ತುರ್ವಿಹಾಳ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು ಸೇರಿದಂತೆ ಇತರೆ ಸಿಬ್ಬಂದಿ ಇದ್ದರು.

# ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ

## ಪರೀಕ್ಷೆ ಫಲಿತಾಂಶ ವೃದ್ಧಿಸಲಿ: ರಾಹುಲ್ ಪಾಂಡ್ವೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಫೆ.05: ಜಿಲ್ಲೆಯಲ್ಲಿ 2024-25ನೇ ಸಾಲಿನಲ್ಲಿ ಜಿಲ್ಲೆಯ ಎಸ್.ಎಸ್.ಎಲ್.ಸಿ ಪರೀಕ್ಷೆಯ ಫಲಿತಾಂಶವನ್ನು ಉತ್ತಮ ಪಡಿಸಲು ಶಿಕ್ಷಣ ಇಲಾಖೆಯ ಅಧಿಕಾರಿಗಳು ಅಗತ್ಯಕ್ರಮ ಕೈಗೊಳ್ಳಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ತುಕರಾಂ ಶ್ರಿಪಾಂಡ್ವೆ ಅವರು ಸೂಚನೆ ನೀಡಿದರು.

ಫೆ.04ರ ಮಂಗಳವಾರದಂದು ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ ಫಲಿತಾಂಶ ವೃದ್ಧಿಗೆ ಸಂಬಂಧಿಸಿದಂತೆ ಜರುಗಿದ ವಿಡಿಯೋ ಸಂವಾದ ಕಾರ್ಯಕ್ರಮ ನಂತರ ಶಿಕ್ಷಣ ಇಲಾಖೆಯ ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರಸಕ್ತ ಶೈಕ್ಷಣಿಕ ವರ್ಷದ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಜಿಲ್ಲೆಯ ಫಲಿತಾಂಶ ಉತ್ತಮ ಪಡಿಸುವಲ್ಲಿ ಇಲಾಖೆಯ ಎಲ್ಲಾ ಅಧಿಕಾರಿಗಳು ಅತ್ಯಂತ ಜವಾಬ್ದಾರಿಯಿಂದ ತಮ್ಮ ಕರ್ತವ್ಯ ನಿರ್ವಹಿಸಬೇಕು. ಕಲಿಕಾಸರೆ ಪುಸ್ತಕಗಳ ಸದುಪಯೋಗ ಪಡೆದುಕೊಳ್ಳಬೇಕು. ಕಳೆದ ಮೂರು ವರ್ಷಗಳ ಪ್ರಶ್ನೆ ಪತ್ರಿಕೆಗಳನ್ನು ಬಿಡಿಸುವುದು ಹಾಗೂ ಪಾಸಿಂಗ್ ಪ್ಯಾಕೇಜ್ ಅಭ್ಯಾಸ ಮಾಡಿಸುವುದು, ಕಲಿಕೆಯಲ್ಲಿ ಹಿಂದುಳಿದ ಮಕ್ಕಳನ್ನು ಸ್ನೇಹಿತರ ಗುಂಪಿನಲ್ಲಿ ಕಲಿಕೆಯಾಗುವಂತೆ ಅವಕಾಶ ಕಲ್ಪಿಸಿ ನಿಧಾನಗತಿ ಕಲಿಕಾ ಮಕ್ಕಳನ್ನು ದತ್ತು ಪಡೆದು ವಿಷಯವಾರು ಶಿಕ್ಷಕರು ಹೆಚ್ಚಿನ ಮುತುವರ್ಜಿ ವಹಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಿಗದಿತ ವೇಳಾಪಟ್ಟಿಯಂತೆ ಜಿಲ್ಲೆಯಲ್ಲಿ ಈಗಾಗಲೇ ಘಟಕ ಪರೀಕ್ಷೆ ಜರುಗಿಸಿ ಫಲಿತಾಂಶವನ್ನು ವಿಶ್ಲೇಷಿಸಬೇಕು. ಘಟಕ ಪರೀಕ್ಷೆಗಳಲ್ಲಿ ಕಡಿಮೆ ಅಂಕಗಳನ್ನು ಪಡೆದ ಮಕ್ಕಳಿಗೆ ಮುಂದಿನ ಪರೀಕ್ಷೆಯಲ್ಲಿ ಉತ್ತಮ ಅಂಕಗಳನ್ನು ಪಡೆಯಲು ಅನುಕೂಲವಾಗುವಂತೆ ಪ್ರೋತ್ಸಾಹ ನೀಡಲು ಕ್ರಮ ಕೈಗೊಳ್ಳಬೇಕು.

ಶಿಕ್ಷಣ ಇಲಾಖೆಯ ಕ್ಷೇತ್ರ ಮಟ್ಟದ ಅಧಿಕಾರಿಗಳು ಅವರ ವ್ಯಾಪ್ತಿಗೊಳಪಡುವ ಶಾಲೆಗಳಿಗೆ ನಿಯಮಿತವಾಗಿ ಭೇಟಿ ನೀಡಿ ಪರೀಕ್ಷಾ ಫಲಿತಾಂಶ ಸುಧಾರಣೆ ಬಗೆಗಿನ ಕ್ರಮಗಳನ್ನು ಪರಿಶೀಲಿಸಿ ವರದಿ ಸಲ್ಲಿಸಲು ಹಾಗೂ ಮಕ್ಕಳ ಆತ್ಮಸ್ಥೈರ್ಯ ವೃದ್ಧಿಸುವಲ್ಲಿ ಅಗತ್ಯತೆ ಮೇರೆಗೆ ಪೋಷಕರ ಸಭೆ ಜರುಗಿಸಿ ವಿದ್ಯಾರ್ಥಿಗಳ ಉತ್ತಮ ಸಾಧನೆಗೆ ಕ್ರಮವಹಿಸಬೇಕೆಂದರು.

ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ತಾಲೂಕುವಾರು ಸಾಧಿಸಬೇಕಾದ ಶೇಕಡವಾರು ಫಲಿತಾಂಶದ ಗುರಿ ಮೇರೆಗೆ ಕಡ್ಡಾಯವಾಗಿ ಉತ್ತಮ ಸಾಧನೆ ಮಾಡಲು ಸೂಚಿಸಿ, ಫಲಿತಾಂಶ ವೃದ್ಧಿಸುವಲ್ಲಿ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಜರುಗಿಸಲಾಗುವುದಾಗಿ ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಿಇಓ ಅವರು ಎಚ್ಚರಿಸಿದರು.

ಇದೇ ಸಂದರ್ಭದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ಕೆ.ಡಿ.ಬಡಿಗೇರ್, ಡಯಟ್, ಪ್ರಾಂಶುಪಾಲರಾದ ಇಂದಿರಾ,, ಶಿಕ್ಷಣಾಧಿಕಾರಿಗಳು ಪ್ರಭು ಕಣ್ಣನ್, ಅಕ್ಷರ ದಾಸೋಹ ಕಾರ್ಯಕ್ರಮ ಮತ್ತು ಎಲ್ಲಾ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು ಉಪಸ್ಥಿತರಿದ್ದರು.

## ಗಿಲ್ಲೇಸೂಗುರಿನಲ್ಲಿ ನರೇಗಾ ಕಾಯಕ ಬಂಧುಗಳ ತರಬೇತಿ ಕಾರ್ಯಗಾರ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಫೆ.05: ನರೇಗಾ ಯೋಜನೆಯು ಗ್ರಾಮೀಣ ಪ್ರದೇಶದ ಕಟ್ಟಕಡೆಯ ವ್ಯಕ್ತಿಗೂ ಮುಟ್ಟಿಸಿ, ಕೂಲಿಕಾರರನ್ನು ಸ್ವಾವಲಂಬನ್ನಾಗಿ ಮಾಡಲು ಕಾಯಕ ಬಂಧುಗಳ ಪಾತ್ರ ಪ್ರಮುಖ ಪಾತ್ರವಾಗಿದೆ ಎಂದು ರಾಯಚೂರು ತಾಲೂಕ ಪಂಚಾಯತಿ ಸಹಾಯಕ ನಿರ್ದೇಶಕರಾದ ಹನುಮಂತ ಅವರು ಹೇಳಿದರು.

ಫೆ.05ರ ಬುಧವಾರ ರಾಯಚೂರು ತಾಲೂಕಿನ ಗಿಲ್ಲೇಸೂಗುರು ಗ್ರಾಮ ಪಂಚಾಯತಿ ಸಭಾಂಗಣದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಗ್ರಾಮ ಸ್ವರಾಜ್ ಅಭಿಯಾನ, ಜಿಲ್ಲಾ ಹಾಗೂ ತಾಲೂಕ ಪಂಚಾಯತಿ ರಾಯಚೂರು ಮತ್ತು ಇನ್‌ಗ್ರೇಡ್ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ತಾಲೂಕ ಮಟ್ಟದ ಕಾಯಕ ಬಂಧುಗಳಿಗೆ ನಡೆದ ನರೇಗಾ ಯೋಜನೆಯ ಕುರಿತು ತರಬೇತಿ ಕಾರ್ಯಾಗಾರ-ಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ನರೇಗಾ ಯೋಜನೆಯು ಗ್ರಾಮೀಣ ಪ್ರದೇಶದ ಕಟ್ಟಕಡೆಯ ವ್ಯಕ್ತಿಗೂ ಪ್ರಯೋಜನವಾಗಲಿದೆ. ಆದ್ದ-ರಿಂದ ಜನರು ನರೇಗಾ ಯೋಜನೆಯಡಿ ಇರುವ ಸೌಲಭ್ಯಗಳ ಬಗ್ಗೆ ಮಾಹಿತಿ ಪಡೆಯಬೇಕು ಎಂದರು.

ಗ್ರಾಮೀಣ ಭಾಗವನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ನಿರಂತರ ಶ್ರಮವಹಿಸಬೇಕು ಎಂದರು. ನರೇಗಾ ಯೋಜನೆಯಡಿ ನೋಂದಾಯಿತ ಪ್ರತಿ ಕುಟುಂಬಕ್ಕೆ 100 ದಿನ ಕೆಲಸವನ್ನು ಸ್ಥಳಿಯವಾಗಿ ನೀಡಲಾಗುತ್ತಿದೆ. ಇಂತಹ ಸೌಲಭ್ಯಗಳನ್ನು ಪ್ರಯೋಜ-ಕಾರಿಯಾಗಿ ಬಳಸಿಕೊಂಡ ಸ್ವಾವಲಂಬಿಯಾಗಬೇಕು ಎಂದರು.

ಗ್ರಾಮ ಸ್ವರಾಜ್ ಅಭಿಯಾನದ ರಾಜ್ಯ ಸಂಚಾಲಕರಾದ ಆಶೋಕ ಯರಗಟ್ಟಿ ಅವರು ಮಾತನಾಡಿ, ತರಬೇತಿಯ ಗುರಿ, ಉದ್ದೇಶ ಹಾಗೂ ಮೂರು ದಿನಗಳ ರೂಪರೇಶಗಳ ಬಗ್ಗೆ ಸವಿಸ್ತಾರವಾಗಿ ತಿಳಿಸಿದರು.

ನಂತರ ನರೇಗಾ ದಿನವನ್ನು ಮೇಟ್‌ಗಳ ಮುಖಾಂತರ ಕೇಕ್ ಕತ್ತರಿಸುವ ಮೂಲಕ ನರೇಗಾ ಹಬ್ಬ ಆಚರಣೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಮಾದೇವಿ, ಪಿಡಿಓ ಸುದರ್ಶನ ಹಾಗೂ ಇನ್‌ಗ್ರೇಡ್ ಸಂಸ್ಥೆಯ ಜಯರಾಜ ಜಕೋಬ್, ಐಇಸಿ ಧನರಾಜ, ಡಿಟಿಸಿ ಈರೇಶ ಮತ್ತು ಐದು ಗ್ರಾಮ ಪಂಚಾಯತಿಯ ಕಾಯಕ ಬಂಧುಗಳು ಇದ್ದರು.

# ನರೇಗಾ ಪ್ರತಿಯೊಬ್ಬರಿಗು ಸಹಾಯಕ: ಇಓ ಸುಲ್ಪಿ



ಮಲ್ಲಮ ನುಡಿ ವಾರ್ತೆ

ಬಸವಕಲ್ಯಾಣ: ಫೆ.5: ಕಾರ್ಮಿಕರು ಆರ್ಥಿಕವಾಗಿ ಸ್ವಾವಲಂಬಿ ಆಗಬೇಕು, ಗ್ರಾಮ ಪಂಚಾಯತ್ ಬಲ ಪಡಿಸಬೇಕು ಮತ್ತು ಬಹು ಬಾಳ್ವಿಕೆಯ ಆಸ್ತಿಗಳ ಸೃಜನೆ ಮಾಡುವುದೇ ನರೇಗಾ ಕಾಯ್ದೆ ಉದ್ದೇಶ ವಾಗಿದೆ ಎಂದು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಮೇಶ ಸುಲ್ಪಿ ಹೇಳಿದರು.

ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಬುಧವಾರ ನಡೆದ ಕಾಯಕ ಬಂಧು ತರಬೇತಿ ಸಮಾರೋಪ ಸಮಾರಂಭ ಹಾಗೂ ಪ್ರಮಾಣ ಪತ್ರ ವಿತರಣಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ನರೇಗಾ ಯೋಜನೆಯು ಪ್ರತಿ ಗ್ರಾಮದ ಮನೆ ಮನೆಗೆ ಮುಟ್ಟಿಸುವ ಕೆಲಸ ಮಾಡಬೇಕು ಮತ್ತು ಕಡತಗಳ ನಿರ್ವಹಣೆ ಮಾಡಬೇಕು ಹಾಗೂ ನರೇಗಾ ಕೂಲಿ ಕಾರ್ಮಿಕರಿಗೆ ಸಮಯಕ್ಕೆ ಸರಿಯಾಗಿ ಕೆಲಸ ಕೊಡುವ ಕಾರ್ಯ ವಾಗಬೇಕು ಎಂಬ ಉದ್ದೇಶ ದಿಂದ ತರಬೇತಿ ನೀಡಲಾಗುತ್ತಿದೆ. ಆದ್ದರಿಂದ ತರಬೇತಿ ಪಡೆದ ಶಿಬಿರಾರ್ಥಿಗಳು ಚನ್ನಾಗಿ ಕೆಲಸ ಮಾಡುವ ಮೂಲಕ ಇತರರಿಗೆ ಮಾದರಿ ಆಗಬೇಕು ಎಂದರು.

ನಂತರ ಆರ್.ಎಲ್.ಎಚ್.ಪಿ. ನಿರ್ದೇಶಕರಾದ ಸರಸ್ವತಿ ಅವರು ಮಾತನಾಡಿ, 20 ಜಿಲ್ಲೆ ಹಾಗೂ 50 ತಾಲೂಕಾ ಮೇಟ್ ತರಬೇತಿ ನಡೆಸಲಾಗುತ್ತಿದೆ. ಆದರೆ ಬಸವಕಲ್ಯಾಣದಲ್ಲಿ ಬಹಳ ಅಚ್ಚು ಕಟ್ಟಾಗಿ ವ್ಯವಸ್ಥೆ ಮಾಡಲಾಗಿದೆ ಮತ್ತು 300 ಮೇಟ್ ಗುರಿಯಲ್ಲಿ ಪೂರ್ಣ ಸಾಧನೆ ಮಾಡಿರುವುದು ಬಹಳ ಹೆಮ್ಮೆಯ ಸಂಗತಿಯಾಗಿದೆ ಎಂದರು.

ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯತ್ ಸಹಾಯಕ ನಿರ್ದೇಶಕರಾದ ಸಂತೋಷ ಚವ್ಹಾಣ ಸರ್, ಅರುಣಕುಮಾರ ಪಾಟೀಲ್ ಸರ್, ತಾ.ಯೋ. ರಾಜಶೇಖ ನೆಲ್ಲಿ ಸರ್, ರಾಜ್ಯ ಸಂಪನ್ಮೂಲ ವ್ಯಕ್ತಿ ನಾಗರಾಜ ಶೀಲವಂತ, ತರಬೇತಿ ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳಾದ ವೀರಾರೆಡ್ಡಿ, ಚಾಮಲಾ, ಅಮರಪಾಲಿ ನಟರಾಜ, ಲಕ್ಷ್ಮೀ ಸೇರಿದಂತೆ ಮತ್ತಿತರರು ಇದ್ದರು. ನಾಗರಾಜ ಶೀಲವಂತ ನಿರೂಪಿಸಿದರು. ಐಇಸಿ ಸಂಯೋಜಕ ವೀರಾರೆಡ್ಡಿ ವಂದಿಸಿದರು.

## ಗ್ರಾಮ ಒನ್ ಸೇವಾ ಕೇಂದ್ರಗಳಿಗೆ ಫ್ರಾಂಚೈಸಿಗಳ ನೇಮಕ: ಅರ್ಜಿ ಆಹ್ವಾನ

ಬಳ್ಳಾರಿ, ಫೆ.05: ಸರ್ಕಾರದ ಇಡಿಸಿಎಸ್ ನಿರ್ದೇಶನಾಲಯದ ಇ-ಆಡಳಿತ ಇಲಾಖೆಯ ನಿರ್ದೇಶನದಂತೆ ಜಿಲ್ಲೆಯಲ್ಲಿ ಖಾಲಿ ಇರುವ ಗ್ರಾಮ ಒನ್ ಸೇವಾ ಕೇಂದ್ರಗಳಿಗೆ ಫ್ರಾಂಚೈಸಿಗಳನ್ನು ನೇಮಕ ಮಾಡಲು ಆಸಕ್ತ ಅರ್ಹ ಆಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿದೆ. ಜಿಲ್ಲೆಯ 08 ಗ್ರಾಮ – ಒನ್ ಕೇಂದ್ರಗಳಿಗೆ ಫ್ರಾಂಚೈಸಿಯನ್ನು ನೇಮಕ ಮಾಡಲು ಉದ್ದೇಶಿಸಲಾಗಿದೆ. ಬಳ್ಳಾರಿ ತಾಲ್ಲೂಕಿನ ಚಾನಾಳ್, ಕುರುಗೋಡು ತಾಲ್ಲೂಕಿನ ಬಾದನಹಟ್ಟಿ, ಏಳುಬೆಂಚಿ, ರ್‍ವಾಯಿ, ಸಿಂಧಿಗೇರಿ, ಸಿರುಗುಪ್ಪ ತಾಲ್ಲೂಕಿನ ಕರೂರು ಮತ್ತು ಸಂಡೂರು ತಾಲ್ಲೂಕಿನ ತೋರಣಗಲ್ಲು, ಗೊಲ್ಲಲಿಂಗಮ್ಮನಹಳ್ಳಿ ಗ್ರಾಮ ಪಂಚಾಯತಿ. ಖಾಲಿಯಿರುವ ಗ್ರಾಮ ಒನ್ ಕೇಂದ್ರಗಳ ವಿವರ ಮತ್ತು ಅರ್ಜಿ ಸಲ್ಲಿಸಲು https://kal-mys.gramaone.karnataka.gov.in/ ಗೆ ಭೇಟಿ ನೀಡಬಹುದು. ನಾಗರೀಕ ಸೇವಾ ಕೇಂದ್ರ ಗ್ರಾಮ ಒನ್ ಫ್ರಾಂಚೈಸಿಯನ್ನು ಬಯಸುವವರು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನ ಫೆಬ್ರವರಿ 15 ಆಗಿರುತ್ತದೆ ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾ.೦೮ರವರೆಗೆ ಬೇಟಿ ಬಚಾವೊ ಬೇಟಿ ಪಡಾವೊ ಯೋಜನೆ ಸರಣಿ ಕಾರ್ಯಕ್ರಮ

ರಾಯಚೂರು ಫೆ.05 : ಕೇಂದ್ರ ಸರ್ಕಾರದ ಬೇಟಿ ಬಚಾವೊ ಬೇಟಿ ಪಡಾವೊ ಯೋಜನೆಯು 10 ವರ್ಷ ಪೂರ್ಣಗೊಳಿಸಿದ ಹಿನ್ನಲೆಯಲ್ಲಿ ಸ್ಥಳೀಯ ಅಧಿಕಾರಿಗಳು, ಶಾಲೆ ಕಾಲೇಜುಗಳು, ಮಹಿಳೆಯರು ಮತ್ತು ಸಮುದಾಯ ಗುಂಪುಗಳ ಪಾಲುದಾರರನ್ನು ತೊಡಗಿಸಿಕೊಂಡು ಕೇಂದ್ರ ಸರ್ಕಾರದಿಂದ ತಿಳಿಸಲಾದ ಮಾರ್ಗಸೂಚಿಯಂತೆ ಸರಣಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.

ಯೋಜನೆಯ ಉದ್ದೇಶಕ್ಕೆ ಅನುಗುಣವಾಗಿ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ವತಿಯಿಂದ ಜನವರಿ 22ರಿಂದ ಮಾ.08ರವರೆಗೆ

ಸರಣಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫೆ.10 ರಂದು ಕಾಯಕ ಶರಣರ ಜಯಂತಿ

ಬಳ್ಳಾರಿ,ಫೆ.05:ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಮಾದಾರ ಚೆನ್ನಯ್ಯ, ಡೋಹರ ಕಕ್ಕಯ್ಯ, ಸಮಗಾರ ಹರಳಯ್ಯ, ಮಾದಾರ ಧೂಳಯ್ಯ ಮತ್ತು ಉರಿಲಿಂಗಪೆದ್ದಿ ಸೇರಿದಂತೆ 'ಕಾಯಕ ಶರಣರ ಜಯಂತಿ' ಕಾರ್ಯಕ್ರಮವನ್ನು ಫೆ.10 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಆಯೋಜಿಸಲಾಗಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್, ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಬಿ.ನಾಗೇಂದ್ರ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಶಶೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಸಂಗನಕಲ್ಲಿನ ನಿವೃತ್ತ ಪ್ರಾಧ್ಯಾಪಕರಾದ ಶ್ರೀನಿವಾಸಮೂರ್ತಿ ಹಾಗೂ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಾದ ಶಾಮಣ್ಣ ಅವರು ಕಾಯಕ ಶರಣರ ಕುರಿತು ವಿಶೇಷ ಉಪನ್ಯಾಸ ನೀಡುವರು.

ಕಾರ್ಯಕ್ರಮದಲ್ಲಿ ಸಿರುಗುಪ್ಪದ ದಳವಾಯಿ ಅಂಬಣ್ಣ ತಂಡದಿಂದ ವಚನ ಸಂಗೀತ ಪ್ರಸ್ತುತ ಪಡಿಸುವರು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್ ಸೇರಿದಂತೆ ಇತರರು ಉಪಸ್ಥಿತರಿರುವರು.

ಜಿಲ್ಲಾ ಮಟ್ಟದ ಅಧಿಕಾರಿಗಳು, ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಶಾಲಾ–ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ತಿಳಿಸಿದ್ದಾರೆ.

# ಕ್ಯಾನ್ಸರ್ ಬಗ್ಗೆ ಭಯ ಬೇಡ, ಮುನ್ನೆಚ್ಚರಿಕೆ ಇರಲಿ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.5–ಪ್ರಾರಂಭಿಕ ಹಂತದಲ್ಲಿ ಕ್ಯಾನ್ಸರ ರೋಗವನ್ನು ಪತ್ತೆ ಹಚ್ಚಿದರೆ ಯಶಸ್ವಿಯಾಗಿ ಗುಣಪಡಿಸಬಹುದು. ಆದ್ದರಿಂದ ರೋಗ ಪೀಡಿತರು ಭಯ ಪಡದೇ ಆತಂಕಕ್ಕೊಳಗಾಗದೆ ತಜ್ಞ ವೈದ್ಯರನ್ನು ಸಂಪರ್ಕಿಸಿ ಚಿಕಿತ್ಸೆ ಪಡೆಯಬಹುದು ಎಂದು ಬಿ.ವಿ.ವಿ.ಎಸ್ ಹೋಮಿಯೋಪಥಿಕ್ ವೈದ್ಯಕೀಯ ಮಹಾವಿದ್ಯಾಲಯದ ಸರ್ಜರಿ ಪ್ರಾಧ್ಯಾಪಕ ಡಾ. ರವಿ.ಎಸ್.ಕೋಟೆಣ್ಣವರ ಹೇಳಿದರು. ನವನಗರದ ಹಿರಿಯ ನಾಗರಿಕರ ಯೋಗಕ್ಷೇಮ ಕೇಂದ್ರದಲ್ಲಿ ವಿಶ್ವ ಕ್ಯಾನ್ಸರ ದಿನಾಚಾರಣೆ ಅಂಗವಾಗಿ ಹಮ್ಮಿಕೊಂಡ ಕ್ಯಾನ್ಸರ್ ಅರಿವು ಕಾರ್ಯಕ್ರಮದಲ್ಲಿ ಅವರು ಉಪನ್ಯಾಸ ನೀಡಿ ಮಾತನಾಡಿದರು. ಸಮುದಾಯ ಆರೋಗ್ಯ ವಿಭಾಗದ ಪ್ರಾಧ್ಯಾಪಕಿ ಡಾ.ಅಖಿಲಾ ಹುಲ್ಲೂರ, ಆಹಾರ ಕ್ರಮ ಹಾಗೂ ಮುಂಜಾಗ್ರತಾ ಕ್ರಮಗಳ ಕುರಿತು ಮಾತನಾಡಿದರು. ಸಂಸ್ಥೆಯ ಅಧ್ಯಕ್ಷ ಎಸ್.ಎಚ್.ಗುಳೇದ ಮಾತನಾಡಿದರು. ಡಾ.ವಿಜಯಲಕ್ಷ್ಮಿ, ಡಾ.ಸುನೀಲ ಭೋಸಲೆ ಉಪಸ್ಥಿತರಿದ್ದರು. ನಿವೃತ್ತ ಪ್ರಾಧ್ಯಾಪಕ ಜಿ.ಎಮ್. ಚನ್ನಪ್ಪಗೋಳ ಸ್ವಾಗತಿಸಿ ವಂದಿಸಿದರು.

# ಬಿಟಿಡಿಎ ಸರ್ಕಾರಿ ಪ್ರೌಢಶಾಲೆಗೆ ಪ್ರೊಜೆಕ್ಟರ್ ಕೊಡುಗೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.5–ನಗರದ ವಿದ್ಯಾಗಿರಿಯ ಬಾಗಲಕೋಟ ವಿಕಾಸ ಪತ್ತಿನ ಸಹಕಾರಿ ಸಂಘ ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ ಆವರಣದಲ್ಲಿರುವ ಸರ್ಕಾರಿ ಪ್ರೌಢಶಾಲೆ(ಆರ್.ಎಂ.ಎಸ್.ಎ)ಗೆ ಡಿಜಿಟಲ್ ಪ್ರೊಜೆಕ್ಟರ್ ಮತ್ತು ಬೋರ್ಡ ಕೊಡುಗೆ ನೀಡಿದೆ. ಪತ್ತಿನ ಸಹಕಾರಿ ಸಂಘದ 9 ನೇ ವಾರ್ಷಿಕೋತ್ಸವದ ಸ್ಮರಣೆಗಾಗಿ ಪ್ರೊಜೆಕ್ಟರ್ ಕೊಡುಗೆ ನೀಡಿದ್ದು, 10 ನೇ ತರಗತಿಯ ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆಯಲಿದ್ದಾರೆ ಎಂದು ಸಂಘದ ಅಧ್ಯಕ್ಷ ಎಸ್.ಕೆ.ಪಾಟೀಲ ತಿಳಿಸಿದರು.

ರವಿವಾರ ಬೆಳಿಗ್ಗೆ ಸಹಕಾರಿ ಸಂಘದ ಕಾರ್ಯಾಲಯದಲ್ಲಿ ವಾರ್ಷಿಕೋತ್ಸವದ ಅಂಗವಾಗಿ ವಿಶೇಷ ಪೂಜೆ ನೆರವೇರಿದ ನಂತರ ಬಿಟಿಡಿಎ ಶಾಲೆಯ ಆವರಣದಲ್ಲಿ ಸಸಿ ನೆಡಲಾಯಿತು. ನಂತರ ಶಾಲೆಯಲ್ಲಿ ಜರುಗಿದ ಸರಳ ಸಮಾರಂಭದಲ್ಲಿ ಶಾಲೆಯ ಮುಖ್ಯಾಧ್ಯಾಪಕಿ ಜಿ.ಎಸ್. ಖೋತ ಅವರಿಗೆ ಸಂಘದ ಅಧ್ಯಕ್ಷ ಎಸ್.ಕೆ.ಪಾಟೀಲ ಪ್ರೊಜೆಕ್ಟರ್ ನೀಡಿದರು.

ಸಮಾರಂಭದಲ್ಲಿ ನಗರಸಭೆ ಸದಸ್ಯ ವಿ.ವಿ.ಶಿರಗನ್ನವರ, ಸಹಕಾರಿ ಸಂಘದ ಉಪಾಧ್ಯಕ್ಷ ಆರ್.ಎನ್.ಕಂಕಾಳೆ, ನಿರ್ದೇಶಕರಾದ ಎಸ್.ಜಿ.ವಿಜಾಪೂರ, ಈಶ್ವರ ಕೋನಪ್ಪನವರ, ಸುನೀಲ ಅಂಬೋರೆ, ಆನಂದ ಪವಾರ, ಪ್ರಭು ಕೊಬ್ರಿ, ಶಿಕ್ಷಣ ಇಲಾಖೆಯ ಬಿಆರ್‌ಪಿ ಜ್ಯೋತಿ ಮುಳ್ಳೂರ, ಸಿಆರ್‌ಪಿ ಮುತ್ತು ಬಳ್ಳಾ, ಬಸವರಾಜ ಬಗಲಿ, ಎಲ್.ಡಿ.ಗೌಡರ, ಸಂಘದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜಿ.ಪಾಟೀಲ, ಲಕ್ಷ್ಮಣ ಹಡಪದ, ಶಿವು ರಾಠೋಡ, ಶಾಲೆಯ ಶಿಕ್ಷಕರು ಇದ್ದರು.

ಇದೇ ಸಂದರ್ಭದಲ್ಲಿ ರಾಷ್ಟ್ರೀಯ ವಿಜ್ಞಾನ ಮೇಳಕ್ಕೆ ಆಯ್ಕೆಯಾಗಿದ್ದ ಶಿರೂರ ಸಿದ್ದೇಶ್ವರ ಪ್ರೌಢಶಾಲೆಯ ವಿದ್ಯಾರ್ಥಿನಿ ಸಹನಾ ಕೊಣ್ಣೂರ ಹಾಗೂ ಸಾಧಕ ವಿದ್ಯಾರ್ಥಿ ಮಂಜುನಾಥ ಹಡಪದ ಅವರನ್ನು ಸನ್ಮಾನಿಸಲಾಯಿತು.

ಜಿ.ಎಸ್.ಖೋತ ಸ್ವಾಗತಿಸಿದರು. ಐ.ಎಸ್. ಕೋನಪ್ಪನವರ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್.ಆರ್.ಬದನೂರ ನಿರೂಪಿಸಿದರು. ಶಿವಾನಂದ ಮಂತ್ರಿ ವಂದಿಸಿದರು.

# ವಿದ್ಯಾರ್ಥಿಗಳು ದೇಶಪ್ರೇಮ ಬೆಳೆಸಿಕೊಳ್ಳಬೇಕು:ಸಂಜಯ್



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.5–ವಿದ್ಯಾರ್ಥಿಗಳು ದೇಶಪ್ರೇಮ ಬೆಳೆಸಿಕೊಂಡು ಜನ್ಮ ನೀಡಿದ ತಂದೆ ತಾಯಿ ಹಾಗೂ ಭೂಮಿಯ ಋಣ ತೀರಿಸುವ ಮೂಲಕ ಜೀವನದ ಸಾರ್ಥಕತೆ ಮೆರೆಯಬೇಕು ಎಂದು ಶಿಕ್ಷಕ ಸಂಜಯ್ ನಡುವಿನಮನಿ ಹೇಳಿದರು.

ನಗರದ ಬಿ.ವಿ.ವಿ.ಸಂಘದ ನೂತನ ಸಭಾಭವನದಲ್ಲಿ ಮಂಗಳವಾರ ನಡೆದ ಬಸವೇಶ್ವರ ಪದವಿಪೂರ್ವ ವಾಣಿಜ್ಯ ಮಹಾವಿದ್ಯಾಲಯದ 2024–25ನೇ ಸಾಲಿನ ಪ್ರತಿಭಾ ಪುರಸ್ಕಾರ ಹಾಗೂ ದ್ವಿತೀಯ ಪಿ.ಯು.ಸಿ. ವಿದ್ಯಾರ್ಥಿಗಳ ಬೀಳ್ಕೊಡುವ ಸಮಾರಂಭದ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ದುಶ್ಚಟಗಳಿಗೆ ಬಲಿಯಾಗಬಾರದು. ಒಳ್ಳೆಯ ವ್ಯಕ್ತಿಗಳಾಗಿ ಸಮಾಜದ ಗೌರವಕ್ಕೆ ಪಾತ್ರರಾಗಬೇಕು. ಸಮಯವನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಸತತ ಅಧ್ಯಯನಶೀಲರಾಗಿ ಮಹಾತ್ಮರ ಆದರ್ಶಗಳನ್ನು ಪಾಲಿಸಿ ಬದುಕು ಕಟ್ಟಿಕೊಳ್ಳಬೇಕು ಎಂದು ಹೇಳಿದ ನಡುವಿನಮನಿ, ಪ್ರತಿಯೊಬ್ಬ ವಿದ್ಯಾರ್ಥಿ ಸಕಾರಾತ್ಮಕ ಚಿಂತನೆಗಳನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಜಗನ್ನಾಥ್ ಚವ್ಹಾಣ ಮಾತನಾಡಿ, ವಿದ್ಯಾರ್ಥಿಗಳು ಅಧ್ಯಯನಶೀಲರಾಗಬೇಕು. ಯುವಶಕ್ತಿ ದೇಶದ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ವಹಿಸಬೇಕು. ವಿದ್ಯಾರ್ಥಿಗಳು ಹೆತ್ತವರು, ಕಲಿತ ಸಂಸ್ಥೆ ಮತ್ತು ಕಲಿಸಿದ ಗುರುಗಳನ್ನು ಎಂದಿಗೂ ಮರೆಯಬಾರದು ಎಂದರು.

ಇದೇ ಸಂದರ್ಭದಲ್ಲಿ 2024ರಲ್ಲಿ ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆಯಲಿ ಉತ್ತೀರ್ಣರಾದ ಎಸ್.ಐ.ಪತ್ತಾರ ಹಾಗೂ ಡಾಕ್ಟರೇಟ್ ಪದವಿ ಮುಗಿಸಿದ ಶ್ರೀಮತಿ ಎಸ್.ಆರ್.ಗರಗದಮಠ ಅವರನ್ನು ಸನ್ಮಾನಿಸಲಾಯಿತು. ಪವಿತ್ರಾ ಹೊಸಮನಿ ಪ್ರಾರ್ಥಿಸಿದರು. ಸಂಯೋಜಕಿ ಜಿ.ಎಸ್.ಶೆಲ್ಲಿಕೇರಿ ಸ್ವಾಗತಿಸಿದರು. ಎಸ್.ಐ.ಪತ್ತಾರ ಪ್ರಾಸ್ತಾವಿಕ ಮಾತನಾಡಿದರು.

# ಮೆಡಿಕಲ್ ಕಾಲೇಜಿನ ವಸತಿ ನಿಲಯಗಳಿಗೆ ಭೂಮಿಪೂಜೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.5–ನಗರದ ಮೆಡಿಕಲ್ ಕಾಲೇಜಿನ ಆವರಣದಲ್ಲಿ ಸಧ್ಯ ನಾಲ್ಕು ಕಾಲೇಜುಗಳು ಸ್ಥಾಪನೆಗೊಂಡಿವೆ. ಶೀಘ್ರದಲ್ಲೇ ಸ್ಪೀಚ್ ಆ್ಯಂಡ್ ಹೀಯರಿಂಗ್ ಕಾಲೇಜು ಕೂಡ ಆರಂಭಗೊಳ್ಳಲಿದೆ ಎಂದು ಬಿವಿವಿ ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ ಹೇಳಿದರು.

ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಆವರಣದಲ್ಲಿ ಹೊಸ ವಸತಿ ನಿಲಯಗಳ ಸ್ಥಾಪನೆಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ಕರ್ನಾಟಕ ಮಾತ್ರವಲ್ಲದೆ ಹೊರರಾಜ್ಯಗಳ ವಿದ್ಯಾರ್ಥಿಗಳು ಇಲ್ಲಿ ಪ್ರವೇಶ ಪಡೆದು ಶಿಕ್ಷಣ ಪಡೆಯುತ್ತಿದ್ದಾರೆ. ಹೀಗಾಗಿ ಅವರಿಗೆ ವಸತಿ ಸೌಲಭ್ಯವನ್ನು ಕೂಡ ಒದಗಿಸಬೇಕು. ಈ ಕಾರಣದಿಂದ ಅತ್ಯುತ್ತಮ ಸೌಲಭ್ಯದ ವಿದ್ಯಾರ್ಥಿ ನಿಲಯಗಳನ್ನು ಸ್ಥಾಪಿಸಲಾಗಿದೆ. ಒಟ್ಟಾರೆ ಬಿ.ವಿ.ವಿ ಸಂಘದ ವಿದ್ಯಾರ್ಥಿ ವಸತಿನಿಲಯಗಳಲ್ಲಿ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಪೂರಕವಾದ ವಾತಾವರಣ ನಿರ್ಮಾಣ ಮಾಡಲಾಗಿದೆ ಎಂದು ಹೇಳಿದರು. ವಿದ್ಯಾರ್ಥಿಗಳ ವಸತಿ ಮತ್ತು ವ್ಯಾಸಂಗಕ್ಕೆ ಅಗತ್ಯವಾದ ಎಲ್ಲ ಸೌಲಭ್ಯಗಳುಳ್ಳ ಅತ್ಯಂತ ಸುಜ್ಜಿತ ವಸತಿನಿಲಯಗಳನ್ನು ಸ್ಥಾಪಿಸಲಾಗುತ್ತಿದೆ. ಅತ್ಯುತ್ತಮ ವಸತಿ ಮತ್ತು ಊಟದ ಸೌಲಭ್ಯವನ್ನು ಒದಗಿಸುವುದರ ಮೂಲಕ ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಉತ್ಕೃಷ್ಟತೆಯನ್ನು ಸಾಧಿಸಲು ಅವಕಾಶ ಮಾಡಿಕೊಡಲಾಗುತ್ತಿದೆ ಎಂದ ಚರಂತಿಮಠ, 65 ಸಾವಿರ ಚದರಡಿಗಳ ವಿಸ್ತೀರ್ಣದಲ್ಲಿ 11.05 ಕೋಟಿ ರೂಪಾಯಿಗಳ ವೆಚ್ಚದಲ್ಲಿ ವಿದ್ಯಾರ್ಥಿಗಳ ವಸತಿನಿಲಯ ಮತ್ತು 60 ಸಾವಿರ ಚದರಡಿಗಳ ವಿಸ್ತೀರ್ಣದಲ್ಲಿ 10.20 ಕೋಟಿ ರೂಪಾಯಿಗಳ ವೆಚ್ಚದಲ್ಲಿ ವಿದ್ಯಾರ್ಥಿನಿಯರ ವಸತಿನಿಲಯ ನಿರ್ಮಾಣ ಮಾಡಲಾಗುತ್ತಿದೆ ಎಂದರು.

ಬಿ.ವಿ.ವಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಹಾಸ್ಟೆಲ್ ಕಮಿಟಿ ಕಾರ್ಯಾಧ್ಯಕ್ಷ ಕುಮಾರಸ್ವಾಮಿ ಹಿರೇಮಠ (ಚಿತ್ತರಗಿ), ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಎಮ್.ಸಜ್ಜನ(ಬೇವೂರ), ಕಟ್ಟಡ ಸಮಿತಿ ಕಾರ್ಯಾಧ್ಯಕ್ಷ ಮಹೇಶ ಕಕರಡ್ಡಿ, ಬಿ.ವಿ.ವಿ ಸಂಘದ ಸದಸ್ಯರು, ಮೆಡಿಕಲ್ ಕಾಲೇಜ್ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ, ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ ಮತ್ತು ಕಾಲೇಜಿನ ಸಿಬ್ಬಂದಿ ಉಪಸ್ಥಿತರಿದ್ದರು.

# ಪತ್ರಕರ್ತ ಮೊಹಮ್ಮದ್ ಅಖಿಲ್ ಉಡೆವುಗೆ ಮಾಧ್ಯಮ ಅಕಾಡೆಮಿ ದತ್ತಿ ಪ್ರಶಸ್ತಿ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಫೆ.5: ಕರ್ನಾಟಕ ಮಾಧ್ಯಮ ಅಕಾಡೆಮಿ ವತಿಯಿಂದ ಮಲ್ಲೇಶ್ವರಂ ಸಿ.ವಿ.ರಾಮನ್ ರಸ್ತೆಯಲ್ಲಿರುವ ಐ.ಐ.ಎಸ್.ಸಿ ಆವರಣದ ಜೆ.ಎನ್.ಟಾಟಾ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾದ 2023 ಮತ್ತು 2024 ನೇ ಸಾಲಿನ ವಾರ್ಷಿಕ ಪ್ರಶಸ್ತಿ ಪ್ರಧಾನ ಸಮಾರಂಭವನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಉದ್ಘಾಟಿಸಿದರು. ಈ ಸಮಾರಂಭದಲ್ಲಿ ಕೊಪ್ಪಳ ಜಿಲ್ಲೆಯ ವಾರ್ತಾಭಾತಿ ಪತ್ರಿಕೆಯ ಜಿಲ್ಲಾ ವರದಿಗಾರ ಮೊಹಮ್ಮದ್ ಅಖೀಲ್ ಉಡೇವು ಅವರಿಗೆ ಕರ್ನಾಟಕ ಮಾಧ್ಯಮ ಅಕಾಡೆಮಿಯ 2024ನೇ ಸಾಲಿನ ಶೋಷಣೆಯನ್ನು ಪರಿಣಾಮಕಾರಿಯಾಗಿ ಬಿಂಬಿಸುವ ವರದಿಗೆ ಪ್ರಜಾ ಸಂದೇಶ ದತ್ತಿ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿದೆ. ಕೊಪ್ಪಳದಲ್ಲಿ ಆಳವಾಗಿ ಬೇರೂರಿದ ಅಸ್ಪೃಶ್ಯೆ ಎಂಬ ವರದಿಗೆ ಈ ದತ್ತಿ ಪ್ರಶಸ್ತಿ ಲಭಿಸಿದೆ. ಇದರ ಜೊತೆಗೆ ಹಿರಿಯ ಪತ್ರಕರ್ತ ಸಿರಾಜ್ ಬಿಸರಳ್ಳಿಗೆ ಅವರಿಗೆ ಕೊಪ್ಪಳ ಜಿಲ್ಲೆಯಲ್ಲಿ ಸುಮಾರು ವರ್ಷಗಳಿಂದ ಪತ್ರಿಕಾರಂಗದಲ್ಲಿ ಸಲ್ಲಿಸಿದ ಸೇವೆಯನ್ನು ಗುರುತಿಸಿ 2023ನೇ ಸಾಲಿನ ವಾರ್ಷಿಕ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿದೆ. ಮತ್ತು ಇನ್ನೋರ್ವ ಹಿರಿಯ ಪತ್ರಕರ್ತ ಹೆಚ್.ಎಸ್.ಹರೀಶ್ ಅವರಿಗೂ ವಾರ್ಷಿಕ ಪ್ರಶಸ್ತಿ ಲಭಿಸಿದೆ.

# ಚಿತ್ತಾಪುರ: ಅರ್ಹ ಮಹಿಳಾ ಸ್ವ-ಸಹಾಯ ಸಂಘಗಳಿಂದ ಆಸಕ್ತಿ ವ್ಯಕ್ತಪಡಿಸುವಿಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಫೆ.05:ಕೇಂದ್ರ ಪುರಸ್ಕೃತ ಅಮೃತ್–2.0 ಯೋಜನೆಯಡಿ "ಅಮೃತ ಮಿತ್ರ" ತಾಂತ್ರಿಕ ಚಟುವಟಿಕೆಯಡಿ (ಖಿಜಛಿಟಿಟಿಛಿಚಿಟ) ಕಾರ್ಯಕ್ರಮದಡಿ ಚಿತ್ತಾಪೂರ ಪುರಸಭೆ ವ್ಯಾಪ್ತಿಯಲ್ಲಿನ ಡೇ–ನಲ್ಮ್ ಅಭಿಯಾನದಡಿ ನೀರಿನ ಬಳಕೆದಾರರ ಶುಲ್ಕ ಮತ್ತು ಆಸ್ತಿ ತೆರಿಗೆ ಸಂಗ್ರಹಿಸುವುದನ್ನು ನಿರ್ವಹಣೆ ಮಾಡಲು ಅರ್ಹ ಮಹಿಳಾ ಸ್ವ–ಸಹಾಯ ಸಂಘಗಳಿಂದ ಆಸಕ್ತಿ ವ್ಯಕ್ತಪಡಿಸುವಿಕೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಚಿತ್ತಾಪುರ ಪುರಸಭೆ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

ಆಸಕ್ತಿಯುಳ್ಳ ಮಹಿಳಾ ಸ್ವ–ಸಹಾಯ ಸಂಘಗಳು ಚಿತ್ತಾಪುರ ಪುರಸಭೆ ಕಚೇರಿಯಿಂದ ನಿಗದಿತ ಅರ್ಜಿ ನಮೂನೆ ಪಡೆದು ಭರ್ತಿ ಮಾಡಿ 2025ರ ಫೆಬ್ರವರಿ 15 ರೊಳಗಾಗಿ ಅರ್ಹ ಮತ್ತು ಆಸಕ್ತ ಮಹಿಳಾ ಸ್ವ–ಸಹಾಯ ಸಂಘಗಳು ತಮ್ಮ ಪ್ರಸ್ತಾವನೆಯನ್ನು ಮುಚ್ಚಿದ ಲಕೋಟೆಯಲ್ಲಿ ಚಿತ್ತಾಪೂರ ಪುರಸಭೆ ಕಚೇರಿಯಲ್ಲಿ ಅರ್ಜಿ ಸಲ್ಲಿಸಬೇಕು. ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಚಿತ್ತಾಪುರ ಪುರಸಭೆ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

# ಎನ್ ಡಿ ಆರ್ ಎಫ್ ತಂಡದಿಂದ ವಿಪತ್ತು ನಿರ್ವಹಣೆ ಬಗ್ಗೆ ವಿದ್ಯಾರ್ಥಿಗಳಿಗೆ ಪ್ರಾತ್ಯಕ್ಷಿಕೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಫೆ.5: ಕುಕನೂರ ಪಟ್ಟಣದ ವಿದ್ಯಾನಂದ ಗುರುಕುಲ ಶಾಲೆಯಲ್ಲಿ ರಾಷ್ಟ್ರೀಯ ವಿಪತ್ತು ನಿರ್ವಹಣೆ ತಂಡದಿಂದ ಸಾಂದರ್ಭಿಕವಾಗಿ ಒದಗುವ ವಿವಿಧ ವಿಪತ್ತುಗಳನ್ನು ನೀವಾರಿಸುವಲ್ಲಿ ತೆಗೆದುಕೊಳ್ಳಬಹುದಾದ ವಿಷಯಗಳ ಬಗ್ಗೆ ಮಾಹಿತಿ ಮತ್ತು ಪ್ರಾತ್ಯಕ್ಷಿಕೆಯನ್ನು ಶಾಲಾ ವಿದ್ಯಾರ್ಥಿಗಳಿಗೆ ಕೈಗೊಳ್ಳಲಾಯಿತು.

ತಂಡದ ಸದಸ್ಯರು ಒಬ್ಬರಾಗಿ ಅಗ್ನಿದುರಂತ, ಹೃದಯಾಘಾತ, ಭೂಕಂಪ, ಹಾವು ಕಚ್ಚಿದಾಯ, ತೆಗೆದುಕೊಳ್ಳಬಹುದಾದ ಕ್ರಮಗಳ ಬಗ್ಗೆ ಪ್ರಾತ್ಯಕ್ಷಿಕೆಯನ್ನು ನೀಡಿದರು.

ಮುಖ್ಯಸ್ಥರು ಹಾಗೂ ಟೀಮ್ ಕಮಾಂಡರ್ ಇನ್ಸಪೆಕ್ಟರ್ 10 ಓಆಖಈ ಅಜಯಕುಮಾರ ಹಾಗೂ ಓಆಖಈ ತಂಡದ ಸದಸ್ಯರು, ವಜ್ರಚೇತನ್ ಜಿ.ಆರ್, ವಿದ್ಯಾನಂದ ಗುರುಕುಲ ಶಾಲೆಯ ಕಾರ್ಯದರ್ಶಿಗಳಾದ ಜಾಗಿರದಾರ, ತಹಶೀಲ್ದಾರರಾದ ಪ್ರಾಣೇಶ್ ಕುಲಕರ್ಣಿ, ತಾಲೂಕ ಪಂಚಾಯತ ಯೋಜನಾ ನಿರ್ದೇಶಕರಾದ ಆನಂದ ಗರೂರ, ಪಟ್ಟಣ ಪಂಚಾಯತಿ ಅಧ್ಯಕ್ಷರು, ವಿವಿಧ ಇಲಾಖೆ ಅಧಿಕಾರಿಗಳು, ಅಗ್ನಿಶಾಮಕ ದಳ ಕುಕನೂರ ಪೋಲೀಸ್, ಶಾಲಾ ಶಿಕ್ಷಕರು, ಶಾಲೆಯ ಮಕ್ಕಳು ಹಾಜರಿದ್ದರು.

## "ಮಿಷನ್ ಶಕ್ತಿ" ಯೋಜನೆಯಡಿ ಜಿಲ್ಲಾ ಸಹಾಯಕ ಸಂಯೋಜಕರ ಹಾಗೂ ತಾಲೂಕು ಸಂಯೋಜಕರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅರ್ಜಿ ಆಹ್ವಾನ

ಮಲ್ಲಮ್ಮನುಡಿ ವಾರ್ತೆ ಕಲಬುರಗಿ,ಫೆ.05:"ಮಿಷನ್ ಶಕ್ತಿ"ಯೋಜನೆಯಡಿ ಜಿಲ್ಲಾ ಮಹಿಳಾ ಸಬಲೀಕರಣ ಘಟಕದಲ್ಲಿ ಪಿ.ಎಮ್.ಎಮ್.ವಿ.ವೈ.ಜಿಲ್ಲಾ ಸಂಯೋಜ-ಕರು (ಡಿ.ಹೆಚ್.ಇ.ಡಬ್ಲ್ಯೂ.)–01 ಹುದ್ದೆ ಹಾಗೂ ಪೋಷಣ್ ಅಭಿಯಾನ ಯೋಜನೆಯಡಿ ಜಿಲ್ಲಾ ಸಹಾಯಕ ಸಂಯೋಜಕರು–01 ಹುದ್ದೆ ಮತ್ತು ತಾಲೂಕಾ ಸಂಯೋಜಕರು (ಅಫಜಲಪೂರ)–01 ಹುದ್ದೆ ಸೇರಿದಂತೆ ಒಟ್ಟು 3 ಹುದ್ದೆಗಳನ್ನು ಜಿಲ್ಲಾ ಮಹಿಳಾ ಸಬಲೀಕರಣ ಘಟಕ ಮತ್ತು ಪೋಷಣ್ ಅಭಿಯಾನ ಯೋಜನೆಗಳು ಜಿಲ್ಲೆಯಲ್ಲಿ ಜಾರಿಯಲ್ಲಿರುವರೆಗೆ ಮಾತ್ರ ಷರತ್ತುಗೊಳಪಟ್ಟು ಹೊರಗುತ್ತಿಗೆ ಆಧಾರದ ಮೇಲೆ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಈ ಹುದ್ದೆಗಳ ನೇಮಕಾತಿಯು ಸಂಪೂರ್ಣವಾಗಿ ತಾತ್ಕಾಲಿಕವಾಗಿದ್ದು, 11 ತಿಂಗಳ ಅವಧಿಗೆ ಗುತ್ತಿಗೆ ಆಧಾರದ ಸೇವೆ ಆಗಿದ್ದು, ನೌಕರರ ಕಾರ್ಯನಿರ್ವಹಣೆ ತೃಪ್ತಿಕರವಾಗಿದ್ದಲ್ಲಿ, ಮುಂದಿನ ಅವಧಿಗೆ ಸೇವೆ ಮುಂದುವರೆಸುವ ಬಗ್ಗೆ ಸೂಕ್ತ ನಿರ್ಧರಿಸಲಾಗುತ್ತದೆ. ಸರ್ಕಾರ ನಿಗದಿಪಡಿಸುವ ಮಾಸಿಕ ಸಂಚಿತ ಸಂಭಾವನೆ ಮಾತ್ರ ಪಾವತಿಸಲಾಗುತ್ತದೆ. ಸರ್ಕಾರದ ಇತರೆ ಯಾವುದೇ ಭತ್ಯೆಗಳಿಗೆ ಹಾಗೂ ಇತರೆ ಸೌಲಭ್ಯಗಳಿಗೆ ಅರ್ಹರಿರುವುದಿಲ್ಲ. ಅಭ್ಯರ್ಥಿಗಳ ವಯೋಮಿತಿ ಕನಿಷ್ಠ 18 ರಿಂದ ಗರಿಷ್ಟ 35 ವರ್ಷ ಮೀರಿರಬಾರದು.

ಆಸಕ್ತ ಹಾಗೂ ಅರ್ಹ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯನ್ನು ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಯಿಂದ ಪಡೆದು ಭರ್ತಿ ಮಾಡಿ ಅವಶ್ಯಕ ದಾಖಲೆಗಳೊಂದಿಗೆ 2025ರ ಫೆಬ್ರವರಿ 20 ರ ಸಂಜೆ 5.30 ಗಂಟೆಯೊಳಗಾಗಿ ಅರ್ಜಿ ಸಲ್ಲಿಸಬೇಕು.

ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲೆಗಳು ಹಾಗೂ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ರೈಲ್ವೆ ಸ್ಟೇಶನ್, ಐ.ಬಿ ರಸ್ತೆ, ಗುರುಕುಲ ಕಾಲೇಜ ಹತ್ತಿರ, ಧಡೇದ್ ಆಸ್ಪತ್ರೆ ಆವರಣ, ಕಲಬುರಗಿ ಕಚೇರಿಯನ್ನು ಹಾಗೂ ಕಚೇರಿ ದೂರವಾಣಿ ಸಂಖ್ಯೆ: 08472–278659, ಮೊಬೈಲ್ ಸಂಖ್ಯೆ 9741565858, 7349177795 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

## ಹೋಬಳಿ ಹಂತದಲ್ಲಿಯೇ ಜನರ ಸಮಸ್ಯೆಗಳ ಇತ್ಯರ್ಥಕ್ಕೆ ಕ್ರಮ: ಜಿಲ್ಲಾಧಿಕಾರಿ ನಲಿನ್ ಅತುಲ್



ವಿವಿಧ ಗ್ರಾಮಗಳ ಗ್ರಾಮಸ್ಥರು ಬೆಳೆ ಪರಿಹಾರ, ಮಾಸಾಶನ, ಜಮೀನು ವರ್ಗಾವಣೆ, ಪೌತಿ ಖಾತೆ, ಪಹಣಿ ತಿದ್ದುಪಡಿ, ರಸ್ತೆ ನಿರ್ಮಾಣ ಹಾಗೂ ಮೂಲಸೌಕರ್ಯ ಕಲ್ಪಿಸುವುದು ಸೇರಿದಂತೆ ನಾನಾ ಬೇಡಿಕೆಗಳ ಅರ್ಜಿಗಳನ್ನು ಸಾರ್ವಜನಿಕರು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿದರು. ಪಿಂಚಣಿ ಸೌಲಭ್ಯ ಸೇರಿದಂತೆ ಕೆಲವೊಂದನ್ನು ಅಹವಾಲುಗಳಿಗೆ ಜಿಲ್ಲಾಧಿಕಾರಿಗಳು ಸ್ಥಳದಲ್ಲಿಯೇ ಪರಿಹರಿಸುವಂತೆ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಾರ್ಯಕ್ರಮದಲ್ಲಿ ಬೇವೂರ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಅಂದಮ್ಮ ಬಳಿಗಾರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೆಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಾಮ್ ಎಲ್ ಅರಸಿದ್ದಿ, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಗ್ರಾ.ಪಂ ಉಪಾಧ್ಯಕ್ಷರಾದ ಲಕ್ಷ್ಮವ್ವ ಚುಕ್ಕಾಣಿ, ಯಲಬುರ್ಗಾ ತಹಸೀಲ್ದಾರ ಬಸವರಾಜ ತನ್ನಳ್ಳಿ, ಉಪ ತಹಶಿಲ್ದಾರ ವಿಜಯಕುಮಾರ ಗುಡದೂರ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಫೆ.5: ಜನಸ್ಪಂದನಾ ಕಾರ್ಯಕ್ರಮಗಳ ಮೂಲಕ ಹೋಬಳಿ ಹಂತದಲ್ಲಿಯೇ ಜನರ ಸಮಸ್ಯೆಗಳನ್ನು ಇತ್ಯರ್ಥ ಪಡಿಸುವ ಪ್ರಯತ್ನವಾಗುತ್ತಿದೆ ಎಂದು ಜಿಲ್ಲಾಧಿಕಾರಿ ನಲಿನ್ ಅತುಲ್ ಹೇಳಿದರು.

ಅವರು ಮಂಗಳವಾರ ಕೊಪ್ಪಳ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ವತಿಯಿಂದ ಯಲಬುರ್ಗಾ ತಾಲೂಕಿನ ಬೇವೂರು ಗ್ರಾಮದ ಬುದ್ದ ಬಸವ ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಂಡಿದ್ದ ತಾಲ್ಲೂಕು ಮಟ್ಟದ "ಜನ ಸ್ಪಂದನಾ" ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸರ್ಕಾರದ ನಿರ್ದೇಶನದನ್ವಯ ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತ ಪರಿಹಾರ, ಸಕಾಲದಲ್ಲಿ ಸೇವೆಗಳನ್ನು ಒದಗಿಸಲು ತಾಲ್ಲೂಕು ಮಟ್ಟದಲ್ಲಿ ಜನಸ್ಪಂದನಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಈಗಾಗಲೇ ಜಿಲ್ಲೆಯ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಈ ಕಾರ್ಯಕ್ರಮ ನಡೆಸಿ ಸಾರ್ವಜನಿಕರ ಕುಂದು ಕೊರತೆಗಳನ್ನು ಪರಿಹರಿಸಲು ಕ್ರಮ ವಹಿಸಲಾಗಿದೆ. ಪ್ರಸ್ತುತ ಹೋಬಳಿ ಮಟ್ಟದಲ್ಲಿಯೂ ಜನಸ್ಪಂದನಾ ಏರ್ಪಡಿಸಿ, ಅಲ್ಲಿನ ಗ್ರಾಮೀಣ ಜನರ ಸಮಸ್ಯೆಗಳನ್ನು ಆಲಿಸಿ, ಬಗೆಹರಿಸಲು ಕ್ರಮ ವಹಿಸಲಾಗುತ್ತಿದೆ. ಜಿಲ್ಲೆಯಲ್ಲಿ ಈ ವರೆಗೆ ಜರುಗಿದ ವಿವಿಧ ಜನಸ್ಪಂದನ ಕಾರ್ಯಕ್ರಮಗಳಲ್ಲಿ ಕುಂದುಕೊರತೆಗಳ ಅರ್ಜಿಗಳು ಹಾಗೂ ಮನವಿಗಳು ಸೇರಿ ಸ್ವೀಕೃತವಾದ ಒಟ್ಟು 2695 ಅರ್ಜಿಗಳಲ್ಲಿ 2683 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದ್ದು, 12 ಅರ್ಜಿಗಳು ಮಾತ್ರ ಬಾಕಿ ಉಳಿದಿವೆ ಎಂದರು. ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಈ ವರ್ಷ ನಮ್ಮ ಜಿಲ್ಲೆಗೆ 387 ಕೋಟಿ ಮಂಜೂರಾಗಿದ್ದು, ಯಲಬುರ್ಗಾಕ್ಕೆ 80 ರಿಂದ 100 ಕೋಟಿ ದೊರೆತಿದೆ. ಸರ್ಕಾರದಿಂದ ಕೆರೆತುಂಬಿಸುವ ಯೋಜನೆಗಾಗಿ ಯಲಬುರ್ಗಾ ವಿಧಾನಸಭಾ ಕ್ಷೇತ್ರಕ್ಕೆ 970 ಕೋಟಿ ಅನುದಾನ ಮಂಜೂರಾಗಿದೆ. ಇದಲ್ಲದೆ ಕಲ್ಯಾಣ ಕರ್ನಾಟಕ ಉತ್ಸವ ದಿನದಂದು ಕಲಬುರಗಿಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಜಿಲ್ಲೆಗೆ ಮೂರು ತಾಲ್ಲೂಕು ಅಸ್ಪತ್ರೆ, 8 ಪ್ರಾರ್ಥಮಿಕ ಆರೋಗ್ಯ ಕೇಂದ್ರಗಳು, 3 ಸಮುದಾಯ ಆರೋಗ್ಯ ಕೇಂದ್ರಗಳು ಮಂಜೂರಾಗಿವೆ ಮತ್ತು ಕೆಲ ಆಸ್ಪತ್ರೆಗಳನ್ನು ಮೇಲ್ದರ್ಜೆಗೆರಿಸಲು ಮಂಜೂರಾತಿ ನೀಡಲಾಗಿದೆ. ಯಲಬುರ್ಗಾ ಕ್ಷೇತ್ರಕ್ಕೆ 4 ಪಿ.ಹೆಚ್.ಸಿ., ಸಿ.ಹೆಚ್.ಸಿ ಮತ್ತು 100 ಹಾಸಿಗೆಯ ಆಸ್ಪತ್ರೆ ದೊರೆತಿದೆ. ಇದರ ಜೊತೆಗೆ 8 ಪ್ರೌಢ ಶಾಲೆಗಳ ಉನ್ನತಿಕರಣ ಹಾಗೂ ವಸತಿ ಶಾಲೆಗಳು ಮಂಜೂರಾಗಿವೆ ಎಂದರು.

ಜನಸ್ಪಂದನ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ವಿವಿಧ ಅರ್ಜಿ ಹಾಗೂ ಮನವಿಗಳ ಸಲ್ಲಿಕೆ: ಬೇವೂರ ಹಾಗೂ ಸುತ್ತಲಿನ

## ಫೆ. 7 ರಂದು ಮಿನಿ ಉದ್ಯೋಗ ಮೇಳ ಆಯೋಜನೆ

ಕಲಬುರಗಿ,ಫೆ.05:ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಇದೇ ಫೆಬ್ರವರಿ 7 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಕಲಬುರಗಿ ಸರ್ಕಾರಿ ಐಟಿಐ ಕಾಲೇಜು ಹಿಂದುಗಡೆಯಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಮಿನಿ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಜೋಯಾಲುಕ್ಕಾಸ್‌ದಲ್ಲಿ ಸೇಲ್ಸ್ ಟ್ರೈನಿ ಹುದ್ದೆಗೆ ವಯೋಮಿತಿ 18 ರಿಂದ 26 ವರ್ಷದೊಳಗಿರಬೇಕು. ಸೇಲ್ಸ್ ಎಕ್ಸಿಕ್ಯೂಟಿವ್ ಹುದ್ದೆಗೆ ವಯೋಮಿತಿ 18 ರಿಂದ 30 ವರ್ಷದೊಳಗಿರಬೇಕು. ರಿಸೆಪ್ಷನಿಸ್ಟ್ (ಮಹಿಳೆ) ಹುದ್ದೆಗೆ ವಯೋಮಿತಿ 18 ರಿಂದ 26 ವರ್ಷದೊಳಗಿರಬೇಕು. ಡಿಪ್ಲೋಮಾ/ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರಬೇಕು.

ಎಸ್.ಆರ್.ವಿ.ಇಲೆಕ್ಟ್ರಾನಿಸ್‌ದಲ್ಲಿ ಕಂಪ್ಯೂಟರ್ ಆಪರೇಟರ್ ಹುದ್ದೆಗೆ ಐಟಿಐ/ಡಿಪ್ಲೋಮಾ (ಕೋಪಾ/ಇಲೆಕ್ಟ್ರಿಕಲ್) ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರಬೇಕು. ವಯೋಮಿತಿ 18 ರಿಂದ 25 ವರ್ಷದೊಳಗಿರಬೇಕು.

ಫ್ರೀಚಾರ್ಜ್‌ದಲ್ಲಿ ಫೀಲ್ಡ್ ಆಫೀಸರ್ ಹುದ್ದೆಗೆ ಪಿಯುಸಿ ಹಾಗೂ ಟೀಮ್ ಲೀಡರ್ ಹುದ್ದೆಗೆ ಯಾವುದೇ ಪದವಿ ಪಾಸಾಗಿರಬೇಕು. ವಯೋಮಿತಿ 18 ರಿಂದ 35 ವರ್ಷದೊಳಗಿರಬೇಕು.

ಪರ್ಸೋಕ್ಲೆಲಿ ಇಂಡಿಯಾ ಲೀ.ದಲ್ಲಿ ಎ.ಎಲ್.ಓ., ಕ್ಯೂಸಿ, ಕ್ಯೂಎ, ಟೀಮ್ ಲೀಡರ್, ಮೆಶೀನ್ ಆಪರೇಟರ್ ಹುದ್ದೆಗೆ ಎಸ್.ಎಸ್.ಎಲ್.ಸಿ/ಪಿಯುಸಿ/ಐಟಿಐ/ಡಿಪ್ಲೋಮಾ ಯಾವುದೇ ಪದವಿ ಪಾಸಾಗಿರಬೇಕು. ವಯೋಮಿತಿ 18 ರಿಂದ 27 ವರ್ಷದೊಳಗಿರಬೇಕು.

ಜೂಮ್‌ಟೇಕ್ ಐಜಿ ದಲ್ಲಿ ನೆಟ್‌ವರ್ಕಿಂಗ್ ವೇಲ್ಡರ್/ಡಿಇಒ/ಸಿಎಸ್‌ಟಿ/ಟೆಲಿಕಾಲರ್/ಎಚ್.ಆರ್ ಎಕ್ಸಿಕ್ಯೂಟಿವ್/ಡೆಸ್ಕ್‌ಟಾಪ್ ಇಂಜಿನಿಯರ್/ಸೈಟ್ ಇಂಜಿನಿಯಿರ್ ಇ.ಟಿಸಿ ಹುದ್ದೆಗೆ ಎಸ್.ಎಸ್.ಎಲ್.ಸಿ./ಪಿಯುಸಿ/ಯಾವುದೇ ಪದವಿ, ಐಟಿಐ/ಡಿಪ್ಲೋಮಾ/ಬಿ.ಎಮ್ (ಫಾರ್ಮಾ) ಬಿ.ಇ/ಬಿ.ಟೇಕ್. ಪಾಸಾಗಿರಬೇಕು. ವಯೋಮಿತಿ 18 ರಿಂದ 35 ವರ್ಷದೊಳಗಿರಬೇಕು.

ಲಾಹೋಟಿ ಮೋಟಾರ್ಸ್‌ದಲ್ಲಿ ಸೇಲ್ಸ್ / ಸರ್ವಿಸ್/ ಬಾಡಿಶಾಪ್ / ಇನ್ಸೂರನ್ಸ್, ಫೈನಾನ್ಸ್, ಅಕೌಂಟ್ಸ್ ಹುದ್ದೆಗೆ ಬಿ.ಎ, ಬಿ.ಕಾಂ, ಬಿ.ಎಸ್.ಸಿ, ಬಿ.ಬಿ.ಎ, ಬಿ.ಬಿ.ಎಮ್ ಯಾವುದೇ ಪಾಸಾಗಿರಬೇಕು. ವಯೋಮಿತಿ 18 ರಿಂದ 35 ವರ್ಷದೊಳಗಿರಬೇಕು. ಸೇಲ್ಸ್ / ಸರ್ವಿಸ್/ ಬಾಡಿಶಾಪ್ ಹುದ್ದೆಗೆ ಬಿ.ಎ, ಬಿ.ಕಾಂ, ಬಿ.ಎಸ್.ಸಿ, ಬಿ.ಬಿ.ಎ, ಬಿ.ಬಿ.ಎಮ್ ಯಾವುದೇ ಪಾಸಾಗಿರಬೇಕು. ವಯೋಮಿತಿ 18 ರಿಂದ 40 ವರ್ಷದೊಳಗಿರಬೇಕು.

ಯುನಿವರ್ಸಲ್ ಸೊಂಪೊ ಜಿಐಸಿ ದಲ್ಲಿ ಸೇಲ್ಸ್ ಮ್ಯಾನೇಜರ್ ಹುದ್ದೆಗೆ ಯಾವುದೇ ಪದವಿ, ಇನ್ಸೂರೆನ್ಸ್ ಸಲಹೆಗಾರ ಹುದ್ದೆಗೆ ಎಸ್.ಎಸ್.ಎಲ್.ಸಿ/ಪಿಯುಸಿ ಐಟಿಐ / ಡಿಪ್ಲೋಮಾ ವಿದ್ಯಾರ್ಹತೆ ಹೊಂದಿರಬೇಕು. ವಯೋಮಿತಿ 18 ರಿಂದ 35 ವರ್ಷದೊಳಗಿರಬೇಕು.

ಝೋಮ್ಯಾಟೋದಲ್ಲಿ ಡೆಲಿವರಿ ಎಕ್ಸಿಕ್ಯೂಟಿವ್ ಹುದ್ದೆಗೆ ಎಸ್.ಎಸ್.ಎಲ್.ಸಿ/ಪಿಯುಸಿ/ಯಾವುದೇ ಪದವಿ ಪಾಸಾಗಿರಬೇಕು. ವಯೋಮಿತಿ 18 ರಿಂದ 45 ವರ್ಷದೊಳಗಿರಬೇಕು.

ಮಹೀಂದ್ರದಲ್ಲಿ ಟೆಕ್ನಿಶಿಯನ್, ಸರ್ವಿರ್ಸ್ ಅಡ್ವಜರ್, ಪಾರ್ಟ್ಸ್ ಇನ್ ಚಾರ್ಜ್ ಹುದ್ದೆಗೆ ಐಟಿಐ, ಡಿಪ್ಲೋಮಾ, ಬಿಇ ವಿದ್ಯಾರ್ಹತೆ ಹೊಂದಿರಬೇಕು. ವಯೋಮಿತಿ 18 ರಿಂದ 30 ವರ್ಷದೊಳಗಿರಬೇಕು.

ಆಸಕ್ತಿಯುಳ್ಳ ಅಭ್ಯರ್ಥಿಗಳು ತಮ್ಮ ಎಲ್ಲಾ ಅಂಕಪಟ್ಟಿಗಳ ಝೆರಾಕ್ಸ್, ರೆಸ್ಯೂಮ್ (ಬಯೋಡೆಟಾ) ಭಾವಚಿತ್ರಗಳು ಹಾಗೂ ಆಧಾರ್ ಕಾರ್ಡ್‌ದೊಂದಿಗೆ ಮೇಲ್ಕಂಡ ದಿನದಂದು ನಡೆಯುವ ಮಿನಿ ಉದ್ಯೋಗಮೇಳದಲ್ಲಿ ಭಾಗವಹಿಸಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಯಾವುದೇ ತರಹದ ಭತ್ಯೆಯನ್ನು ನೀಡಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯನ್ನು ಹಾಗೂ ಕಚೇರಿ ದೂರವಾಣಿ ಸಂಖ್ಯೆ 08472–274846 ಹಾಗೂ ಮೊಬೈಲ್ ಸಂಖ್ಯೆ 9620095270 ಗೆ ಸಂಪರ್ಕಿಸಲು ಕೋರಲಾಗಿದೆ.

## ಹೆಲ್ಮೆಟ್ ವಿತರಿಸಿ, ಹೂವಿನ ಹಾರಹಾಕಿ ವಿಭಿನ್ನವಾಗಿ ಸಂಚಾರಿ ನಿಯಮಗಳ ಜಾಗೃತಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಫೆ.5:ಪಟ್ಟಣದಲ್ಲಿ ಸುಮಾರು 30 ಹೆಲ್ಮೆಟ್ ವಿತರಿಸಿ, ಹೂವಿನ ಹಾರಹಾಕಿ ವಿಭಿನ್ನವಾಗಿ ಸಂಚಾರಿ ನಿಯಮವನ್ನು ಕಮಲನಗರ ಪೊಲೀಸರಿಂದ ಜಾಗೃತಿ ಮೂಡಿಸುವ ಅಭಿಯಾನ ಬುಧವಾರ ನಡೆಯಿತು.

ತಾಲೂಕಿನ ಕಮಲನಗರ ಪೊಲೀಸ್ ಠಾಣೆ ವತಿಯಿಂದ ಗ್ರಾಮದ ಅಲ್ಲಮಪ್ರಭು ವೃತ್ತ ಬಳಿ ಆಯೋಜನೆ ಮಾಡಿದ ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹ ಕುರಿತು ಆಯೋಜಿಸಿದ್ದ ಜನಜಾಗೃತಿ ಕಾರ್ಯಕ್ರಮದಲ್ಲಿ ಸಿಪಿಐ ಅಮರಪ್ಪ ಶಿವಬಲ ಹೆಲ್ಮೆಟ ಇಲ್ಲದೆ ಬೈಕ ಚಲಿಸುತ್ತಿರುವ ಪ್ರಯಾಣಿಕರಿಗೆ ಹೆಲ್ಮೆಟ ಹಾಕಿ ಹೂವಿನಹಾರ ಹಾಕಿ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು.

ಸಾರಿಗೆ ಇಲಾಖೆ ಹಾಗೂ ಸಂಚಾರಿ ಪೊಲೀಸರು ಜಾರಿಗೆ ತಂದಿರುವ ನಿಯಮಗಳನ್ನು ಸಾರ್ವಜನಿಕರು ಕಡ್ಡಾಯವಾಗಿ ಪಾಲಿಸಬೇಕು, ತಮ್ಮ ಅಮೂಲ್ಯ ಜೀವದ ಮಹತ್ವವನ್ನು ಅರಿತು ರಸ್ತೆಗೆ ಇಳಿಯಬೇಕು, ನೀವು ಪದೆ ಪದೆ ಸಂಚಾರ ನಿಯಮ ಉಲ್ಲಂಘನೆ ಮಾಡಿದರೆ ದಂಡ ಕಟ್ಟಬೇಕಾಗುತ್ತೆ ಎಂದು ಹೇಳಿದರು.

ಪಿಎಸ್‌ಐ ಚಂದ್ರಶೇಖರ ನಿರ್ಣೆ ಮಾತನಾಡಿ, ವಾಹನ ಚಾಲಕರು ಕಡ್ಡಾಯವಾಗಿ ರಸ್ತೆ ನಿಯಮ ಪಾಲಿಸುವುದರ ಮೂಲಕ ರಸ್ತೆ ಅಪಗಾತ ತಡೆಗಟ್ಟಿ ಜೀವ ರಕ್ಷಿಸಿಕೊಳ್ಳಿ. ಸಾರ್ವಜನಿಕರು ಸಾರಿಗೆಯನ್ನು ಆದಷ್ಟು ಉಪಯೋಗಿಸಬೇಕು. ದ್ವಿಚಕ್ರ ವಾಹನ ಸವಾರರು ಕಡ್ಡಾಯ ವಾಗಿ ಹೆಲ್ಮೆಟ್ ಧರಿಸಬೇಕು. ಹಾಗೂ ಹೆಲ್ಮೆಟ್ ಇಲ್ಲದವರಿಗೆ ಸ್ಥಳದಲ್ಲಿಯೇ 30 ಹೆಲ್ಮೆಟ್ ವಿತರಿಸಲಾಯಿತು. ಕಾರಿನಲ್ಲಿ ಸೀಟ್ ಬೆಲ್ಟ್ ಧರಿಸಿ ವಾಹನ ಚಲಾಯಿ ಸಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ವಸಂತ, ನರೇಶ, ಎಎಸ್ ಐ ವಿರಶೆಟ್ಟಿ, ಎಎಸಐ ಶಾವುರಾಜ, ಎಎಸ್‌ಐ ಉಮಾಜಿ, ಎಚ್ ಸಿ ಲೋಕೆಶ, ಶಿವಾನಂದ ಸಿಪಿಸಿ, ಸಂತೋಷ ಎಸ್‌ಎ, ನರೇಶ, ಮಹಾದೇವ ಬಿರಾದಾರ, ಪರಶುರಾಮ, ಸಂತೋಷ ಸಿಪಿಸಿ, ಸೇರಿದಂತೆ ಕಮಲನಗರ ಪೊಲೀಸ್ ಸಿಬ್ಬಂದಿ ಹಾಗೂ ಪ್ರಯಾಣಿಕರು ಇದ್ದರು.

## ಇಳಕಲ್ಲನಲ್ಲಿ ಲೈಫ್ ಎ ವರ್ಲ್ಡ ಪುಸ್ತಕ ಬಿಡುಗಡೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.5–ಶೃದ್ಧಾ ಹಂಡಗಿ ಅವರ ವಿಹಾರ ಮತ್ತು ಲೈಫ್ ಎ ವರ್ಲ್ಡ ಕೃತಿಗಳನ್ನು ಇಳಕಲ್ಲನಲ್ಲಿ ಈಚೆಗೆ ವಿಜಯಮಹಾಂತ ಮಠದ ಪೂಜ್ಯಗುರುಮಹಾಂತಶ್ರೀಗಳು ಬಿಡುಗಡೆಗೊಳಿಸಿದರು ಚಾಲುಕ್ಯ ನಗರದ ಬನಶ್ರೀನಿಲಯದಲ್ಲಿ ನಡೆದ ಕಾರ್‍ಯಕ್ರಮದಲ್ಲಿ ಪ್ರತಿಯೊಬ್ಬರಲ್ಲಿರುವ ಚೈತನ್ಯ ಬರವಣಿಗೆಗೆ ಸ್ಪೂರ್ತಿ ನೀಡಲಿದ್ದು, ಅದನ್ನೇ ಅರಿವು ಎಂದ ಹೇಳಲಾಗುತ್ತಿದೆ. ಶೃದ್ಧಾ ಹಂಡಗಿ ತನ್ನ ಕೃತಿಗಳಲ್ಲಿ ಅಂತರಮುಖಿಯಾಗಿ ಕೆಲಸ ಮಾಡಿದ್ದಾಳೆ ಎಂದು ಪೂಜ್ಯರು ಹೇಳಿದರು.

ಶಿಕ್ಷಕಿ ಇಂದುಮತಿ ಪುರಾಣಿಕ ವಿಹಾರ ಕೃತಿಯನ್ನು ಹಾಗೂ ಡಾ.ಶ್ರೀಶೈಲ ಗೋಲಗೊಂಡ ಲೈಫ್ ಎ ವರ್ಲ್ಡ ಕೃತಿಯನ್ನು ಪರಿಚಯಿಸಿದರು. ಮಲ್ಲಿಕಾರ್ಜುನ ಅಂಗಡಿ, ಪ್ರೊ.ಶ್ರೀಶೈಲ ಮಡಿವಾಳ ಮುಖ್ಯಅತಿಥಿಗಳಾಗಿ ಪಾಲ್ಗೊಂಡಿದ್ದರು. ಅಧ್ಯಕ್ಷತೆಯನ್ನು ಹಿರಿಯ ಪತ್ರಕರ್ತ ಮಹಾಂತೇಶ ಗೊರಜನಾಳ ವಹಿಸಿದ್ದರು.

ಅಕ್ಕನ ಬಳಗದ ಮಾತೆಯರು ವಚನ ಪಠಿಸಿದರು. ಸಾಹಿತಿ ಡಾ.ಸಿದ್ದಲಿಂಗ ಹಂಡಿಗಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸರೋಜಾ ಗೌಡರ, ನಿವೃತ್ತ ಸೈನಿಕ ಮಲ್ಲನಗೌಡ ಗೌಡರ ವೇದಿಕೆಯಲ್ಲಿದ್ದರು. ಸವಿತಾ ಅಂಗಡಿ ನಿರೂಪಿಸಿದರು. ಸುಮಾ ಹಂಡಿಗಿ ವಂದಿಸಿದರು.

## ಸರ್ಕಾರಿ ಆಸ್ಪತ್ರೆಗೆ ತಜ್ಞ ವೈದ್ಯರ ನೇಮಿಸಲು ಕರವೇ ಮನವಿ



ಲಿಂಗಸೂಗೂರು:ಫೆ.5:ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಘಟಕದ ಅಧ್ಯಕ್ಷರಾದ ಜಿಲಾನಿ ಪಾಶ ನೇತೃತ್ವದಲ್ಲಿ ಪಟ್ಟಣದ ಸರ್ಕಾರಿ ಆಸ್ಪತ್ರೆಯು ಜಿಲ್ಲೆಯಲ್ಲಿಯೇ ಅತಿ ಹೆಚ್ಚು ರೋಗಿಗಳಿಗೆ ಚಿಕಿತ್ಸೆ ನೀಡುವ ಕೇಂದ್ರವಾಗಿದೆ. ಪಕ್ಕದ ಜಿಲ್ಲೆಯ ಸುರುಪುರ, ಹುಣಸಗಿ, ಮಸ್ಕಿ, ತಾಲ್ಲೂಕುಗಳಿಂದ ನೂರಾರು ರೋಗಿಗಳು ದಿನಪ್ರತಿ ಚಿಕಿತ್ಸೆಗೆ ಸರ್ಕಾರಿ ಆಸ್ಪತ್ರೆಯನ್ನೆ ನೆಚ್ಚಿಕೊಂಡಿದ್ದಾರೆ. ಆದರೆ ಆಸ್ಪತ್ರೆಯಲ್ಲಿ ನುರಿತ ತಜ್ಞ ವೈದ್ಯರಾದ ಹೃದಯರೋಗ ತಜ್ಞರು, ಚರ್ಮರೋಗ ತಜ್ಞರು ಹಾಗೂ ಇನ್ನೊಬ್ಬ ಸ್ತ್ರೀರೋಗ ತಜ್ಞರ ಅವಶ್ಯಕತೆ ಹೆಚ್ಚಾಗಿದೆ.

ಈ ವಿಭಾಗದಲ್ಲಿ ತಜ್ಞ ವೈದ್ಯರ ಅನುಪಸ್ಥಿತಿ ಅಥವಾ ಕೊರತೆಯು ರೋಗಿಗಳಿಗೆ ಗಮನಾರ್ಹ ತೊಂದರೆಗಳನ್ನು ಉಂಟುಮಾಡುತ್ತಿದೆ. ಇದು ಚಿಕಿತ್ಸೆಯಲ್ಲಿ ವಿಳಂಭ ಮತ್ತು ಇತರೆ ಆಸ್ಪತ್ರೆಗಳಿಗೆ ಶಿಫಾರಸು ಮಾಡಲು ಕಾರಣವಾಗುತ್ತದೆ, ಇದು ಆರೋಗ್ಯ ವ್ಯವಸ್ಥೆಗೆ ಮತ್ತಷ್ಟು ಹೊರೆಯಾಗಿದೆ. ಅನೇಕ ರೋಗಿಗಳು. ವಿಶೇಷವಾಗಿ ಆರ್ಥಿಕವಾಗಿ ದುರ್ಬಲ ವರ್ಗಗಳಿಂದ ಬಂದವರು, ಖಾಸಗಿ ಆರೋಗ್ಯ ಸೇವೆಯನ್ನು ಪಡೆಯಲು ಅಸಮರ್ಥರಾಗಿದ್ದಾರೆ ಮತ್ತು ವಿಶೇಷ ಚಿಕಿತ್ಸೆಗಾಗಿ ಸಂಪೂರ್ಣವಾಗಿ ಸರ್ಕಾರಿ ವೈದ್ಯಕೀಯ ಸೌಲಭ್ಯಗಳನ್ನು ಅವಲಂಬಿಸಿದ್ದಾರೆ. ಅಲ್ಲದೇ ಹೃದಯಾಘತ ಸಂಭವಿಸಿದಲ್ಲಿ ದೂರದ ರಾಯಚೂರು ಬಾಗಲಕೋಟೆಗೆ ಹೋಗಬೇಕಾದ ಸಂಧರ್ಬದಲ್ಲಿ ಮರಣಹೊಂದಿದ ಉದಾಹರಣೆಗಳು ಇವೆ.

ಕೂಡಲೇ ಪಟ್ಟಣದ ಸರ್ಕಾರಿ ಆಸ್ಪತ್ರೆಗೆ ಹೃದಯರೋಗ ತಜ್ಞರು, ಚರ್ಮರೋಗ ತಜ್ಞರು ಹಾಗೂ ಇನ್ನೊಬ್ಬ ಸ್ತ್ರೀರೋಗ ತಜ್ಞರ ನೇಮಿಸಲು ಅಗತ್ಯ ಕ್ರಮಕೈಗೊಳ್ಳುವಂತೆ ಇದು ಸ್ಥಳೀಯ ಸಮುದಾಯಕ್ಕೆ ಹೆಚ್ಚು ಪ್ರಯೋಜನವನ್ನು ನೀಡುತ್ತದೆ ಮತ್ತು ಆಸ್ಪತ್ರೆಯು ಒದಗಿಸುವ ಆರೋಗ್ಯ ಸೇವೆಗಳ ಗುಣಮಟ್ಟವನ್ನು ಸುಧಾರಿಸುತ್ತದೆ. ಈ ವಿಷಯದಲ್ಲಿ ಸಕಾರಾತ್ಮಕ ಪ್ರತಿಕ್ರಿಯೆ ಮತ್ತು ತ್ವರಿತ ಕ್ರಮಕ್ಕಾಗಿ ನಮ್ಮ ಸಂಘಟನೆ ನೇತೃತ್ವದಲ್ಲಿ ಜಿಲ್ಲಾಧಿ ಕಾರಿಗಳಿಗೆ ಮನವಿ ಸಲ್ಲಿಸಿದರು ಈ ಸಂದರ್ಭದಲ್ಲಿ ಕರವೇ ಕಾರ್ಯ ಕರ್ತರು ಉಪಸ್ಥಿತರಿದ್ದರು.

## ಫೆ. 8 ರಂದು ಕೂಕನೂರ ನವೋದಯ ವಿದ್ಯಾಲಯದ 9 ನೇ ಮತ್ತು 11 ನೇ ತರಗತಿಯ ಪ್ರವೇಶ ಪರೀಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಫೆ.5:ಕುಕನೂರಿನ ಜವಾಹರ ನವೋದಯ ವಿದ್ಯಾಲಯದ 9ನೇ ಮತ್ತು 11ನೇ ತರಗತಿಯ ಪ್ರವೇಶ ಪರೀಕ್ಷೆ ಫೆಬ್ರವರಿ 8ರಂದು ನಡೆಯಲಿದೆ. ಜವಾಹರ ನವೋದಯ ವಿದ್ಯಾಲಯದಲ್ಲಿ 2025–26ನೇ ಸಾಲಿನಲ್ಲಿ 9ನೇ ತರಗತಿಯ ಮತ್ತು 11ನೇ ತರಗತಿಯ ಪ್ರವೇಶಕ್ಕಾಗಿ ಈಗಾಗಲೇ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಿದ ವಿದ್ಯಾರ್ಥಿಗಳು, ಹಾಲ್ ಟಿಕೆಟ್ ಡೌನ್ ಲೋಡ್ ಮಾಡಿಕೊಂಡು ಪರೀಕ್ಷಾ ಕೇಂದ್ರವಾದ ಜವಾಹರ ನವೋದಯ ವಿದ್ಯಾಲಯ, ಕುಕನೂರು, ಇಲ್ಲಿಗೆ ಬಂದು ಪರೀಕ್ಷೆಯನ್ನು ಬರೆಯಬೇಕು ಎಂದು ಪ್ರಾಚಾರ್ಯರಾದ ಜೆ.ಜಯಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಸ್ ಕಂಡಕ್ಟರ್ ಮೇಲೆ ಹಲ್ಲೆ: ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.5:ಪಟ್ಟಣದ ಬಸ್ ನಿಲ್ದಾಣದಲ್ಲಿ ಮಂಗಳವಾರ ಬಸ್ ಕಂಡಕ್ಟರ್ ಮೇಲೆ ಹಲ್ಲೆ ನಡೆದಿರುವ ಘಟನೆಯನ್ನು ಖಂಡಿಸಿ ಚಾಲಕರು, ಕಂಡಕ್ಟರ್ ಪ್ರತಿಭಟನೆ ನಡೆಸಿದರು.

ಬಸ್ ಕಂಡಕ್ಟರ್ ಶಶಿಕಾಂತ ರಾಮಚಂದ್ರ ಸೋನಕೇರಾ ಹಲ್ಲೆ ಮಾಡಿರುವ ಆರೋಪಿಗೆ ಬಂಧಿಸಬೇಕು. ತಪ್ಪಿಲ್ಲದೆ ಬಸ್ ಕಂಡಕ್ಟರ್, ಚಾಲಕರ ಮೇಲೆ ಹಲ್ಲೆ ನಡೆದಾಗ ಗ್ರಾಮಸ್ಥರು ಬೆಂಬಲಕ್ಕೆ ಬರಬೇಕು. ಮುಂದೆ ಇಂತಹ ಘಟನೆಗಳನ್ನು ಮರುಕಳಿಸದಂತೆ ನೋಡಿಕೊಳ್ಳಬೇಕು ಎಂಬ ಬೇಡಿಕೆಗಳೊಂದಿಗೆ ಮಧ್ಯಾಹ್ನ ಸುಮಾರು ಒಂದು ಗಂಟೆ ಬಸ್ ಸಂಚಾರ ಸ್ಥಗಿತಗೊಳಿಸಿ ಪ್ರತಿಭಟನೆ ನಡೆಸಿದರು.

ವಿಭಾಗೀಯ ಸಂಚಾರ ಅಧಿಕಾರಿ ಐ.ಎಂ.ಬಿರಾದಾರ, ಕಾರ್ಮಿಕ ಕಲ್ಯಾಣ ಅಧಿಕಾರಿ ರಾಜಶೇಖರ ತಾಳಘಟಕರ್, ವಿಭಾಗೀಯ ಭದ್ರತಾ ಅಧಿಕಾರಿ ಸಂಜೀವಕುಮಾರ, ಸಂಚಾರಿ ನಿರೀಕ್ಷಕ ಹಣಮಂತಪ್ಪಾ, ನಗರ ಪೊಲೀಸ್ ಠಾಣೆಯ ಸಿಪಿಐ ಬಿ.ಅಮರೇಶ ಅವರು ಸ್ಥಳಕ್ಕೆ ಭೇಟಿ ನೀಡಿ ಮುಂದೆ ಈ ರೀತಿಯ ಘಟನೆ ನಡೆಯದಂತೆ ಮುನ್ನೆಚ್ಚರಿಕೆ ವಹಿಸಲು ಕ್ರಮ ಕೈಗೊಳ್ಳಲಾಗುವುದು, ಹಲ್ಲೆ ಮಾಡಿದ ಆರೋಪಿಯನ್ನು ಬಂಧಿಸಲಾಗುವುದು ಎಂಬ ಭರವಸೆ ನೀಡಿದ ನಂತರ ಪ್ರತಿಭಟನೆಯನ್ನು ಹಿಂಪಡೆದರು.

ಯುನಿಯನ್ ಅಧ್ಯಕ್ಷ ಶಿವಕುಮಾರ ಗಾಯಕವಾಡ ಸೇರಿದಂತೆ ಇತರರು ಇದ್ದರು.

ಜೊಳದಾಪಕಾ ಗ್ರಾಮದ ಬಸ್ ನಿಲುಗಡೆ ಸ್ಥಳದಲ್ಲಿ ಬಸ್ ನಿಂತಾಗ ಮೂವರು ಪ್ರಯಾಣಿಕರು ಬಸ್ ಹತ್ತಿದರು. ಬಸ್ ಹಿಂಬಾಲಿಸಿ ಮುಂದಿನ ನಿಲುಗಡೆ ಸ್ಥಳದಲ್ಲಿ ಬಸ್ ಹತ್ತಿದ ಆರೋಪಿ ಸಾಲುಮನ್ ನಿಮಗೆ ಐದು ನಿಮಿಷ ಬಸ್ ನಿಲ್ಲಿಸಲು ಆಗುವುದಿಲ್ಲವೇ ಎನ್ನುತ್ತಾ ಅವಾಚ್ಯ ಶಬ್ದಗಳಿಂದ ನಿಂದಿಸಿ ಕೈಯಲ್ಲಿನ ಖಡ್ಗದಿಂದ ಹಣೆಗೆ ಹೊಡೆದಿದ್ದಾನೆ.

ಈ ಸಂಬಂಧ ಧನ್ನೂರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಹೇಮರಡ್ಡಿ ಮಲ್ಲಮ್ಮಳ ಬದುಕು ಆದರ್ಶಪ್ರಾಯ:ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.5-ಹೇಮರಡ್ಡಿ ಮಲ್ಲಮ್ಮಳ ಅಚಲ ಭಕ್ತಿ ಹಾಗೂ ಕೌಟುಂಬಿಕ ಮೌಲ್ಯಗಳು ಸರ್ವಕಾಲೀಕವಾಗಿದ್ದು, ಅವಳ ಜೀವನ ಮಹಿಳಾ ಕುಲಕ್ಕೆ ಮಾದರಿಯಾಗಿದೆ ಎಂದು ಮಾಜಿ ಸಚಿವ ಎಸ್. ಆರ್.ಪಾಟೀಲ ಹೇಳಿದ್ದಾರೆ.

ಜಿಲ್ಲೆಯ ಇಳಕಲ್ಲ ತಾಲೂಕಿನ ಗೋನಾಳ ಎಸ್.ಟಿ ಗ್ರಾಮದಲ್ಲಿ ಹೇಮ ವೇಮ ಸಮಾಜ ಅಭಿವೃದ್ಧಿ ಸಮಿತಿ ನೂತನವಾಗಿ ನಿರ್ಮಿಸಿದ ಹೇಮರಡ್ಡಿ ಮಲ್ಲಮ್ಮ ದೇವಸ್ಥಾನದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಹೇಮರಡ್ಡಿ ಮಲ್ಲಮ್ಮ ಹಾಗೂ ಮಹಾಯೋಗಿ ವೇಮನರು ರಡ್ಡಿ ಸಮಾಜದ ಎರಡು ಕಣ್ಣುಗಳು. ಅವರ ತತ್ವಾದರ್ಶಗಳು ಮನುಕುಲಕ್ಕೆ ಮಾದರಿ ಎಂದರು.

ಅಧ್ಯಕ್ಷತೆ ವಹಿಸಿದ್ದ ಹುನಗುಂದ ಮಾಜಿ ಶಾಸಕ ದೊಡ್ಡನಗೌಡ ಪಾಟೀಲ, ಹೇಮರಡ್ಡಿ ಮಲ್ಲಮ್ಮ ಹಾಗೂ ಮಹಾಯೋಗಿ ವೇಮನರ ಆದರ್ಶದ ಬದುಕು ನಮಗೆ ಮಾರ್ಗದರ್ಶಿಯಾಗಿದ್ದು, ಮಲ್ಲಮ್ಮಳ ಅಚಲವಾದ ಭಕ್ತಿ, ಅವಳ ಜೀವನ ಮಹಿಳಾ ಕುಲಕ್ಕೆ ಆದರ್ಶಪ್ರಾಯವಾಗಿದೆ ಎಂದು ಹೇಳಿದರು.

ಸಾನಿಧ್ಯವಹಿಸಿ ಆಶೀರ್ವಚನ ನೀಡಿದ ಎರೆಹೊಸಳ್ಳಿಯ ರಡ್ಡಿ ಗುರುಪೀಠದ ಪೂಜ್ಯ ವೇಮನಾನಂದ ಮಹಾಸ್ವಾಮಿಗಳು, ಹೇಮರಡ್ಡಿ ಮಲ್ಲಮ್ಮ ಸರಳ ಜೀವನ, ಭಕ್ತಿಭಾವದ ಗುಣಗಳಿಂದಾಗಿ ಸದಾ ಸ್ಮರಣೀಯರಾಗಿದ್ದಾರೆ ಎಂದರು.

ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ, ಡಿಸಿಸಿ ಬ್ಯಾಂಕ್ ನಿರ್ದೇಶಕ ಶಿವನಗೌಡ ಅಗಸಿಮುಂದಿನ, ಎಸ್.ಆರ್.ನವಲಿಹಿರೇಮಠ, ರಡ್ಡಿ ಜನಸಂಘದ ಕಾರ್ಯದರ್ಶಿ ಶೇಖರರೆಡ್ಡಿ, ನಿರ್ದೇಶಕ ಕೆ.ವಿ.ಕೃಷ್ಣಾರಡ್ಡಿ, ವಿರುಪಾಕ್ಷಪ್ಪ ಸಂಗನಾಳ, ಪರುತಗೌಡ ಪಾಟೀಲ, ಬಸವರಾಜ ತಾಳಿಕೋಟಿ, ಮಹಾಂತೇಶ ಮೂಲಿಮನಿ, ಎಂ.ಆರ್.ಪಾಟೀಲ, ವಿಜಯ ಗಿರಡ್ಡಿ ಮತ್ತಿತರರು ಇದ್ದರು.

# ಬಳ್ಳಾರಿ ಜಿಲ್ಲಾ ಪಂಚಾಯತ್‌ಗೆ 'ನರೇಗಾ ಪ್ರಶಸ್ತಿ' ನಾಲ್ಕು ವಿಭಾಗಗಳಲ್ಲಿ ಅತ್ಯುತ್ತಮ ಸಾಧನೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.05:2023-24ನೇ ಸಾಲಿನಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿದ್ದಕ್ಕಾಗಿ ಬಳ್ಳಾರಿ ಜಿಲ್ಲಾ ಪಂಚಾಯತ್‌ಗೆ 'ನರೇಗಾ ಪ್ರಶಸ್ತಿ' ಸೇರಿ ಒಟ್ಟು ನಾಲ್ಕು ವಿಭಾಗಗಳಲ್ಲಿ ಪುರಸ್ಕಾರ ಲಭಿಸಿದೆ.

*ಪ್ರಶಸ್ತಿ ವಿವರ(ಕಲ್ಬುರ್ಗಿ ವಿಭಾಗ):*

ಅತ್ಯುತ್ತಮ ಜಿಲ್ಲಾ ಪುರಸ್ಕಾರ- ಬಳ್ಳಾರಿ ಜಿಲ್ಲಾ ಪಂಚಾಯತಿ.

ಅತ್ಯುತ್ತಮ ಜಿಲ್ಲಾ ಒಗ್ಗೂಡಿಸುವಿಕೆ ಪುರಸ್ಕಾರ- ಅರಣ್ಯ ಇಲಾಖೆ.

ಅತ್ಯುತ್ತಮ ತಾಲ್ಲೂಕು ಪಂಚಾಯಿತಿ ಪುರಸ್ಕಾರ- ಸಂಡೂರು ತಾಲ್ಲೂಕು ಪಂಚಾಯಿತಿ.

ಅತ್ಯುತ್ತಮ ಗ್ರಾಮ ಪಂಚಾಯಿತಿ ಪುರಸ್ಕಾರ- ದಮ್ಮೂರು ಗ್ರಾಮ ಪಂಚಾಯಿತಿ, ಕುರುಗೋಡು ತಾಲ್ಲೂಕು.

ಬೆಂಗಳೂರಿನ ವಸಂತ ನಗರದ ಅಂಬೇಡ್ಕರ್ ಭವನದಲ್ಲಿ ಬುಧವಾರ ಆಯೋಜಿಸಿದ್ದ ನರೇಗಾ ಹಬ್ಬ-2025 ಕಾರ್ಯಕ್ರಮದಲ್ಲಿ ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಪ್ರಶಸ್ತಿ ಪ್ರದಾನ ಮಾಡಿದರು.

ಬಳ್ಳಾರಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ಪ್ರಶಸ್ತಿ ಸ್ವೀಕರಿಸಿದರು.

ಈ ವೇಳೆ ಗ್ರಾಮೀಣಾಭಿವೃದ್ಧಿ ಆಯುಕ್ತರಾದ ಪವನ್ ಕುಮಾರ್ ಮಾಲಪಾಟಿ, ಬಳ್ಳಾರಿ ಜಿಪಂ ಉಪಕಾರ್ಯದರ್ಶಿ ಗಿರಿಜಾ ಶಂಕರ್ ಹಾಗೂ ಇತರರು ಇದ್ದರು. ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಭಿನಂದಿಸಿದ್ದಾರೆ.

# ಕರ್ಕಶ ಶಬ್ದದ ಸೈಲೈನ್ಸರ್ ಜಪ್ತಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.5: ಪಟ್ಟಣದಲ್ಲಿ ಬೈಕ್‌ಗಳಿಗೆ ದುಬಾರಿ ಬೆಲೆಯ ಸೈಲೆನ್ಸರ್‌ಗಳನ್ನು ಅಳವಡಿಸಿಕೊಂಡು ಕರ್ಕಶ ಶಬ್ದದ ಮೂಲಕ ಜನರಿಗೆ ತೊಂದರೆ ನೀಡುತ್ತಿದ್ದ 15ಕ್ಕೂ ಅಧಿಕ ಬೈಕ್ ಗಳ ಸೈಲೈನ್ಸರ್‌ಗಳನ್ನು ಪೊಲೀಸರು ಜಪ್ತಿ ಮಾಡಿಕೊಂಡಿದ್ದಾರೆ.

ಪಟ್ಟಣದಲ್ಲಿ ಕೆಲ ತಿಂಗಳಿನಿಂದ ಯುವಕರು ಬೈಕ್ ಗಳಿಗೆ ಹೆಚ್ಚು ಶಬ್ದ ಮಾಡುವ ಸೈಲೈನ್ಸರ್ ಅಳವಡಿಸಿ ಪಟ್ಟಣದ ವಿವಿಧ ರಸ್ತೆ, ಬಡಾವಣೆಗಳಲ್ಲಿ ಕರ್ಕಶ ಶಬ್ದ ಉಂಟು ಮಾಡಿ ಸಾರ್ವಜನಿಕರಿಗೆ ತೊಂದರೆ ಕೊಡುತ್ತಿದ್ದರು.

ಹಾಗಾಗಿ ಹೆಚ್ಚು ಶಬ್ದ ನೀಡುವ ಬೈಕ್ ಗಳನ್ನು ಪತ್ತೆ ಹಚ್ಚಲು ಡಿವೈಎಸ್ಪಿ ಶಿವಾನಂದ ಪವಾಡಶೆಟ್ಟಿ ಮಾರ್ಗದರ್ಶನದಲ್ಲಿ ನಗರ ಪೊಲೀಸ್ ಠಾಣೆಯ ಪೊಲೀಸರು ತಂಡ ರಚಿಸಿ ಪಟ್ಟಣದ ವಿವಿಧೆಡೆ ಅಡ್ಡಾಡುತ್ತಿದ್ದ ಹೆಚ್ಚು ಶಬ್ದ ಮಾಡುತ್ತಿದ್ದ ಬೈಕ್ ಗಳನ್ನು ಪೊಲೀಸರು ವಶಕ್ಕೆ ಪಡೆದು ಸೈಲೈನ್ಸರ್ ಗಳನ್ನು ಜಪ್ತಿ ಮಾಡಿಕೊಂಡರು.

ನಂತರ ಬೈಕ್‌ಗಳ ಮಾಲೀಕರನ್ನು ಠಾಣೆಗೆ ಕರೆಸಿ ತಿಳುವಳಿಕೆ ಮೂಡಿಸಿ ಮುಂದಿನ ದಿನಗಳಲ್ಲಿ ಬೈಕ್‌ಗಳಿಗೆ ಹೆಚ್ಚು ಶಬ್ದ ಮಾಡುವ ಸೈಲೈನ್ಸರ್ ಅಳವಡಿಸಿದರೆ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿ ಕಳುಹಿಸಿದರು.



ಬಸವಕಲ್ಯಾಣ : ತಾಲೂಕಿನ ಸುಕ್ಷೇತ್ರ ಹಾರಕೂಡ ಸಂಸ್ಥಾನ ಹಿರೇಮಠದ ಸಂಗೀತ ಸಾಧಕರಿಗೆ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಕಲ್ಯಾಣ ಕರ್ನಾಟಕ ಸಂಗೀತ ರತ್ನ ಪ್ರಶಸ್ತಿ ಪ್ರದಾನ ಮಾಡಿದರು. ಈ ಸಂದರ್ಭದಲ್ಲಿ ಪೂಜ್ಯ ಶ್ರೀ ಚನ್ನಬಸವನಂದ ಸ್ವಾಮಿಜಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ರೂಗಿ ಗ್ರಾಪಂಗೆ ಅತ್ಯುತ್ತಮ ಗ್ರಾಮ ಪಂಚಾಯಿತಿ ಪ್ರಶಸ್ತಿ ಪ್ರದಾನ




ಮಲ್ಲಮ್ಮ ನುಡಿ ವಾರ್ತೆ

ಇಂಡಿ :ಫೆ.5:ತಾಲೂಕಿನ ರೂಗಿ ಗ್ರಾಮ ಪಂಚಾಯತಿಗೆ ಸನ್ 2023-24ನೇ ಸಾಲಿನ ನರೇಗಾ ಯೋಜನೆಯ ರಾಜ್ಯ ಮಟ್ಟದ ಅತ್ಯುತ್ತಮ ಗ್ರಾಮ ಪಂಚಾಯತಿ ಪ್ರಶಸ್ತಿ' ದೊರಕಿದೆ. ಸನ್ 2023-24ನೇ ಸಾಲಿನಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಅತ್ಯುತ್ತಮ ಕಾಮಗಾರಿಗಳನ್ನು ಅನುಷ್ಠಾನ ಮಾಡಿದ ಫಲವಾಗಿ ರಾಜ್ಯ ಮಟ್ಟದ ಪ್ರಶಸ್ತಿ ಲಭಿಸಿದ್ದು,

ಪೆ.5ರಂದು ಬೆಂಗಳೂರಿನ ಡಾ. ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಜರುಗಿದ ನರೇಗಾ ಹಬ್ಬ-2025 ಕಾರ್ಯಕ್ರಮದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವರಾದ ಪ್ರಿಯಾಂಕ ಖರ್ಗೆ ಅವರು ಪ್ರಶಸ್ತಿ ಪ್ರದಾನ ಮಾಡಿದರು. ಗ್ರಾಪಂ ಅಧ್ಯಕ್ಷ ಸೊಮವ್ವ ಯಶವಂತ ಹೊಸಮನಿ, ತಾಪಂ ಸಹಾಯಕ ನಿರ್ದೇಶಕರಾದ ಸಂಜಯ ಖಡಗೇಖರ, ಗ್ರಾಪಂ ಪಿಡಿಒ ಬಸವರಾಜ ಬಬಲಾದ, ಟಿಐಇಸಿ ರಾಮನಗೌಡ ಸರಬಡಗಿ, ತಾಂತ್ರಿಕ ಸಹಾಯಕರಾದ ಈರಣ್ಣ ಇಂಡಿ ಸೇರಿದಂತೆ ಇತರರು ಹಾಜರಿದ್ದರು.

# ಸದಾ ಮುಚ್ಚಿರುವ ಹುಮನಾಬಾದ್ ಪಿಕೆಪಿಎಸ್ ರೈತರ ನರಕಯಾತನೆ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್. ಇಲ್ಲಿನ ಪಿಕೆಪಿಎಸ್ ಸುಸೈಟಿ ಪ್ರತಿ ನಿತ್ಯ ಮುಚ್ಚಿರುತ್ತದೆ. ರೈತರು ದಿನಾಲು ಇಲ್ಲಿಗೆ ಬಂದು ಹೊಗುತ್ತಿದ್ದಾರೆ. ಕೆಳುವರು ಹೇಳುವರು ಯಾರು ಇಲ್ಲದಂತಾಗಿದೆ ಎಂದು ಸುಸೈಟಿಗೆ ಬಂದ ರೈತನ ಗೊಳು ಇದಾಗಿದೆ.

ಬುಧವಾರ ರೈತ ತಮ್ಮ ಸಾಲವನ್ನು ರಿನಿವಲ್ ಮಾಡಿಕೊಳ್ಳಲು ಬಂದಿದ್ದ. ಆದರೆ ಬಂದ ದಾರಿಗೆ ಸುಂಕವಿಲ್ಲದಹಾಗೆ ರೈತರು ವಾಪಸ್ ತೆರಳುತ್ತಿದ್ದಾರೆ. ಇದರಿಂದ ಪ್ರತಿ ನಿತ್ಯ ರೈತರು ನರಕಯಾತನೆ ಅನುಭವಿಸುವಂತಾಗಿದೆ. ರೈತರ ನೆರವಿಗೆ ಯಾರೂ ಮುಂದೆ ಬಾರದೆ ಇರುವದು ಇದು ದುರಾದ್ರಷ್ಟಕರ ಸಂಗತಿ. ಜಿಲ್ಲಾಡಳಿತ ತಕ್ಷಣ ರೈತರ ನೆರವಿಗೆ ಧಾವುಗಿಸಬೇಕು ಎಂಬ ಒತ್ತಾಯ ರೈತರದಾಗಿದೆ.

# ರಸ್ತೆ ಅಪಘಾತ: ಗಾಯಾಳು ಮಹಿಳೆ ಸಾವು

ಮಲ್ಲಮ್ಮ ನುಡಿ ವಾರ್ತೆ

ಬೀದರ್, ಫೆ.5: ರಸ್ತೆ ಅಪಘಾತದಲ್ಲಿ ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿದ್ದ ಮಹಿಳೆಯೊಬ್ಬರು ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿರುವ ಘಟನೆ ಜಿಲ್ಲೆಯ ಭಾಲ್ಕಿಯಲ್ಲಿ ಸಂಭವಿಸಿದೆ. ಮೃತ ಮಹಿಳೆಯನ್ನು ಕೆರೂರ್ ಗ್ರಾಮದ ನಿವಾಸಿ ಸುನೀತಾ ಬಿರಾದಾರ್ ಎಂದು ಗುರುತಿಸಲಾಗಿದೆ.



ಕಳೆದ ಭಾನುವಾರ ಭಾಲ್ಕಿ ತಾಲ್ಲೂಕಿನ ಹಲಬರ್ಗಾ ಸಮೀಪದ ಪೆಟ್ರೋಲ್ ಪಂಪ್ ಬಳಿ ಸ್ಕೂಟಿಯೊಂದು ಸುನೀತಾ ಅವರಿಗೆ ಡಿಕ್ಕಿ ಹೊಡೆದ ಪರಿಣಾಮ ಗಂಭೀರವಾಗಿ ಗಾಯಗೊಂಡಿದ್ದರು. ಕೂಡಲೇ ಅವರನ್ನು ಜಿಲ್ಲಾ ಕೇಂದ್ರದ ಖಾಸಗಿ ಆಸ್ಪತ್ರೆಗೆ ಸಾಗಿಸಿ ಚಿಕಿತ್ಸೆ ನೀಡಲಾಗಿತ್ತು. ನಂತರ ಹೆಚ್ಚಿನ ಚಿಕಿತ್ಸೆಗಾಗಿ ಮಂಗಳವಾರ ಜಿಲ್ಲಾ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ಮುಂದುವರಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಬುಧವಾರ ಮಹಿಳೆಯು ಮೃತಪಟ್ಟಿದ್ದಾರೆ ಎಂದು ತಿಳಿದು ಬಂದಿದೆ. ಈ ಕುರಿತು ಧನ್ನೂರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ದರೋಡೆಕೋರರ ಗುಂಡೇಟಿನಿಂದ ಗಾಯಗೊಂಡ ಸಂತ್ರಸ್ತ ಶಿವಕುಮಾರಗೆ ಬಿಜೆಪಿ ಜಿಲ್ಲಾ ಘಟಕದಿಂದ ಲಕ್ಷ ಪರಿಹಾರ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 05 : ದ-ರೋಡೆಕೋರರ ಗುಂಡೇಟಿಗೆ ಗಾಯಗೊಂಡಿರುವ ನಗರದ ಲಾಡಗೇರಿಯ ಶಿವಕುಮಾರ ಅವರಿಗೆ ಜಿಲ್ಲಾ ಬಿಜೆಪಿಯಿಂದ 1 ಲಕ್ಷ ನಗದು ಪರಿಹಾರ ನೀಡಲಾಗಿದೆ.

ಜನವರಿ 16ರಂದು ನಗರದ ಎಸ್‌ಬಿಐ ಕಚೇರಿ ಎದುರು ನಡೆದ ದರೋಡೆ ಪ್ರಕರಣದಲ್ಲಿ ಶಿವಕುಮಾರ ಅವರ ಮೇಲೆ ಗುಂಡಿನ ದಾಳಿ ನಡೆದು ಗಂಭೀರವಾಗಿ ಗಾಯಗೊಂಡಿದ್ದರು. ಹೈದರಾಬಾದ್ ಆಸ್ಪತ್ರೆಯಲ್ಲಿ ಶಸ್ತ್ರಚಿಕಿತ್ಸೆಗೆ ಒಳಪಟ್ಟ ನಂತರ ಚೇತರಿಸಿಕೊಂಡು ಅವರು ಮನೆಗೆ ಮರಳಿದ್ದಾರೆ.

ಜಿಲ್ಲಾ ಬಿಜೆಪಿ ಅಧ್ಯಕ್ಷ ಸೋಮನಾಥ ಪಾಟೀಲ, ಶಾಸಕ ಡಾ. ಶೈಲೇಂದ್ರ ಕೆ. ಬೆಲ್ದಾಳೆ ಅವರು ಮಂಗಳವಾರ ಅವರ ಮನೆಗೆ ಭೇಟಿ ಕೊಟ್ಟು, 1 ಲಕ್ಷ ನಗದು ಪರಿಹಾರ ವಿತರಿಸಿದರು.

ಬಳಿಕ ಮಾತನಾಡಿದ ಸೋಮನಾಥ ಪಾಟೀಲ, ಶಿವಕುಮಾರ ಅವರ ಚಿಕಿತ್ಸಾ ವೆಚ್ಚವನ್ನು ಸಿಎಂಎಸ್ ಕಂಪನಿ ಭರಿಸಿದೆ. ಆದರೆ, ಸರ್ಕಾರದಿಂದ ಇದುವರೆಗೆ ಒಂದು ರೂಪಾಯಿ ಸಹ ಪರಿಹಾರ ಅವರಿಗೆ ನೀಡಿಲ್ಲ. ಸರ್ಕಾರ ಅವರಿಗೆ ಸೂಕ್ತ ಪರಿಹಾರ ಕೊಡಬೇಕು. ಅವರಿಗೆ ಉದ್ಯೋಗ ನೀಡದಿದ್ದರೆ ಪಕ್ಷದಿಂದ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಮುಖಂಡರಾದ ಬಾಬು ವಾಲಿ, ರಾಜಶೇಖರ ನಾಗಮೂರ್ತಿ, ಶಶಿ ಹೊಸಳ್ಳಿ, ರಾಜಕುಮಾರ ಪಾಟೀಲ, ವೀರು ದಿಗ್ವಾಲ, ವೀರೇಶ ಸ್ವಾಮಿ ಇತರರು ಹಾಜರಿದ್ದರು.

# ತೋಟೇಂದ್ರ ಶ್ರೀಗಳ ಅಳಿಯ ಮಠದಲ್ಲಿ ನೇಣಿಗೆ ಶರಣು

ವಾಡಿ,ಫೆ.5:ಸುಕ್ಷೇತ್ರ ನಾಲವಾರ ಶ್ರೀಕೋರಿಸಿದ್ದೇಶ್ವರ ಸಂಸ್ಥಾನ ಮಠದ ಪೀಠಾಧಿಪತಿ ಡಾ.ಸಿದ್ದ ತೋಟೇಂದ್ರ ಶಿವಾಚಾರ್ಯ ಅವರ ಅಳಿಯ ಶ್ರೀಮಠದಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಮಂಗಳವಾರ ಬೆಳಿಗ್ಗೆ ಜರುಗಿದೆ.

ಸಮೀಪದ ನಾಲವಾರ ಶ್ರೀಕೋರಿಸಿದ್ದೇಶ್ವರ ಮಠದ ನಿವಾಸಿ ಮಲ್ಲಿಕಾರ್ಜುನ ಹಿರೇಮಠ (ಗುಂಡು ಮುತ್ಯಾ) ತಂದೆ ವೀರಯ್ಯ (35) ಮೃತ ದುರ್ದೈವಿಯಾಗಿದ್ದಾನೆ. ಕುಟುಂಬದಲ್ಲಿನ ಆಂತರಿಕ ಕಲಹವೇ ಸಾವಿಗೆ ಕಾರಣ ಎನ್ನಲಾಗಿದೆ. ಮೃತರಿಗೆ ಪತ್ನಿ ಹಾಗೂ ತಾಯಿ ಇದ್ದಾರೆ. ಶ್ರೀಕೋರಿಸಿದ್ದೇಶ್ವರ ಮಠದ ಕೋಣೆಯಲ್ಲೇ ನೇಣು ಬಿಗಿದುಕೊಂಡ ಸ್ಥಿತಿಯಲ್ಲಿ ಶವ ಪತ್ತೆಯಾಗಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.